ಧಾರವಾಡ * ಕಾರವಾರ * ಹಾವೇರಿ * ಕೊಪ್ಪಳ * ಬಳ್ಳಾರಿ * ಬಾಗಲಕೋಟ * ವಿಜಯನಗರ * ಗದಗದಿಂದ ಏಕ ಕಾಲಕ್ಕೆ ಒಂದೇ ಸಂಚಿಕೆ ಪ್ರಕಟಗೊಳ್ಳುವ ದಿನ ಪತ್ರಿಕೆ



# ಸ್ನೇಹ ಜೀವಿ

ಉತ್ತರ ಕರ್ನಾಟಕದ ಧ್ವನಿ...!

SNEHAJEEVI KANNADA DAILY

ಕನ್ನಡ ದಿನಪತ್ರಿಕೆ

ಡಾ. ಎ.ಎನ್. ಶಾಲಗಾರ ಸಾರಥ್ಯದಲ್ಲಿ | MAG: PRBCR-10/2016-17 | Mob: 94827 70999 | e-mail: snehajeevidaily@gmail.com | Editor: Dr. A.N. Shalagar

RNI NO. KARKAN/2013/49379 | Volume / ಸಂಪುಟ : 14 | Issue / ಸಂಚಿಕೆ : 220 | Date : 11-09-2025 ಬುಧವಾರ | Page / ಪುಟ : 4 | ಗದಗ–GADAG | Rs. 2/-




ಪುಟ -4 ಪರಪ್ಪನ ಅಗ್ರಹಾರದ ಕರ್ಮಕಾಂಡ ಬಯಲು

ಪುಟ -3 ಅಕ್ರಮ ಗಣಿಗಾರಿಕೆ ಸಂಪತ್ತು ವಸೂಲಾತಿ ಆಯುಕ್ತರ ನೇಮಕಕ್ಕೆ ಸರ್ಕಾರ ಗೆಜೆಟ್

ಪುಟ -2 ರೈತರು ಹಗಲು ಹೊತ್ತಿನಲ್ಲೇ ಏಳು ಗಂಟೆ ವಿದ್ಯುತ್ : ಸಚಿವ ಕೆ.ಜೆ.ಜಾರ್ಜ್

ಪುಟ -4 ಹುಬ್ಬಳ್ಳಿ : ಪಿಡಬ್ಲ್ಯುಡಿ ಇಲಾಖೆಯಲಿ ಹೇಳೋ–ರಿಲ್ಲ ...ಕೇಳೋರಿಲ್ಲ ....!



❑ ಸ್ನೇಹಜೀವಿ ನ್ಯೂಸ್

ಉತ್ತರ ಪ್ರದೇಶದ ಲಕ್ನೋ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರಿಗೆ ಅಲ್ಲಿನ ಕಾಂಗ್ರೆಸ್ ನಾಯಕರು ಪುಷ್ಪಗುಚ್ಛ ನೀಡಿ ಸ್ವಾಗತಿಸಿದರು.

## ಶಾಸಕಾಂಗ ಅಂಗೀಕರಿಸಿ ಮಸೂದೆ ತಡೆಗೆ ರಾಷ್ಟ್ರಪತಿ,ರಾಜ್ಯಪಾಲರಿಗೆ ಅಧಿಕಾರವಿಲ್ಲ



❑ ಸ್ನೇಹಜೀವಿ ನ್ಯೂಸ್

ನವದೆಹಲಿ, ಸೆ.10:– ಶಾಸಕಾಂಗ ಅಂಗೀಕರಿಸಿದ ಮಸೂದೆಯು ಅಸಾಂವಿಧಾನಿಕ ಅಥವಾ ಕೇಂದ್ರ ಕಾನೂನಿಗೆ ವಿರುದ್ಧವಾಗಿದೆ ಎಂಬ ಕಾರಣದಿಂದಾಗಿ ಅದನ್ನು ತಡೆಯಲು ಸಂವಿಧಾನವು ರಾಷ್ಟ್ರಪತಿ ಮತ್ತು ರಾಜ್ಯಪಾಲರಿಗೆ ಯಾವುದೇ ವಿವೇಚನೆ(ಅಧಿಕಾರ)ಯನ್ನು ನೀಡುವುದಿಲ್ಲ ಎಂದು ವಿರೋಧ ಪಕ್ಷಗಳ ಆಡಳಿತವಿರುವ ಕರ್ನಾಟಕ,ಪಂಜಾಬ್, ಕೇರಳ ಮತ್ತು ತೆಲಂಗಾಣ ರಾಜ್ಯಗಳು ಸುಪ್ರೀಂ ಕೋರ್ಟ್‌ಗೆ ತಿಳಿಸಿವೆ.

ಕೇಂದ್ರ ಮತ್ತು ರಾಜ್ಯಗಳಲ್ಲಿ ಕ್ಯಾಬಿನೆಟ್ ಆಡಳಿತ ವ್ಯವಸ್ಥೆಯ ಪರಮಾಧಿಕಾರವನ್ನು ಪ್ರತಿಪಾದಿಸಿದ ಗೋಪಾಲ್ ಸುಬ್ರಮಣ್ಯಂ, ಸಿಜೆಐ ನೇತೃತ್ವದ ಐವರು ನ್ಯಾಯಾಧೀಶರ ಪೀಠಕ್ಕೆ ನೀಡಿದ ಹೇಳಿಕೆಯಲ್ಲಿ ಅಂಗೀಕ–ರಿಸಲ್ಪಟ್ಟ ಮಸೂದೆಗಳು ಜನರ ಇಚ್ಛೆಯ ಅಭಿವ್ಯಕ್ತಿಯಾಗಿದೆ ಮತ್ತು ಆದ್ದರಿಂದ ರಾಷ್ಟ್ರಪತಿ ಅಥವಾ ರಾಜ್ಯಪಾಲರು ಅಂತಹ ಮಸೂದೆಗಳನ್ನು ಒಮ್ಮೆ ಸಲಹೆಗಳೊಂದಿಗೆ ಶಾಸಕಾಂಗಕ್ಕೆ ಹಿಂದಿರುಗಿಸಬಹುದು ಎಂದು ಹೇಳಿದರು.

"ರಾಜ್ಯಪಾಲರಿಗೆ ವ್ಯಾಪಕ ವಿವೇಚನಾಧಿಕಾರವನ್ನು ನೀಡುವುದು ದ್ವಂದ್ವ ಪ್ರಭುತ್ವಕ್ಕೆ ಕಾರಣವಾಗುತ್ತದೆ" ಎಂದು ಇದೇ ವೇಳೆ ಸುಬ್ರಮಣ್ಯಂ ಅವರು ಹೇಳಿದ್ದಾರೆ. ರಾಜ್ಯಪಾಲರಿಗೆ ಯಾವುದೇ ವೀಟೋ ಅಧಿಕಾರವನ್ನು ನೀಡುವುದು 4ನೇ ಪುಟ

## ಮೋದಿ ಜೊತೆ ಮಾತುಕತೆಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಿದ್ಧ



ವಾಷಿಂಗ್ಟನ್/ನವದೆಹಲಿ,ಸೆ.10– ಭಾರತ–ಅಮೆರಿಕಾ ನಡುವೆ ವ್ಯಾಪಾರ ಒಪ್ಪಂದ ಅಂತಿಮಗೊಳಿಸುವ ನಿಟ್ಟಿನಲ್ಲಿ ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಪ್ರಧಾನಿ ನರೇಂದ್ರ ಮೋದಿ ಮುಂದಾಗಿದ್ದು ಈ ಮೂಲಕ ಉಭಯ ದೇಶಗಳ ನಡುವೆ ನಡೆದಿರುವ ಬಿಗುವಿನ ವಾತಾರಣ ತಿಳಿಯಾಗುವ ನಿರೀಕ್ಷೆ ಇದೆ.

ರಷ್ಯಾದಿಂದ ಭಾರತ ತೈಲ ಖರೀದಿ ಮಾಡುತ್ತಿರುವ ಹಿನ್ನೆಲೆಯಲ್ಲಿ ಉಂಟಾಗಿರುವ ವ್ಯಾಪಾರ ಒಪ್ಪಂದದ ಗೊಂದಲ ಮತ್ತು ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಭಾರತ–ಅಮೆರಿಕಾ ಮುಂದಾಗಿವೆ.

ತಮ್ಮ ಆತ್ಮೀಯ ಸ್ನೇಹಿತ ಹಾಗು ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ಜೊತೆಗೆ ಮಾತುಕತೆಗೆ ತಾವು ಸಿದ್ದ ಎಂದು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿರುವ ಬೆನ್ನಲ್ಲೇ ಪ್ರಧಾನಿ ನರೇಂದ್ರ ಮೋದಿ ಅವರು ಕೂಡ ಈ 4ನೇ ಪುಟ

## ಪ್ರಿಯಕರನ ಜೊತೆ ಸೇರಿ ಹೆತ್ತ ಮಗಳನ್ನೇ ಕೊಂದ ಪಾಪಿ ತಾಯಿ; ಗಂಡನ ಈ ಮಾತಿನಿಂದ ಹೊರಬಂತು ಸತ್ಯ!




❑ ಸ್ನೇಹಜೀವಿ ನ್ಯೂಸ್

**ಹಾವೇರಿ ಸೆ.10: : ಪ್ರಿಯಕರನ ಜೊತೆ ತಾನು ಹೆತ್ತಮಗಳನ್ನೇ ಇಲ್ಲೊಬ್ಬ ಪಾಪಿ ತಾಯಿ ಕೊಂದು ಹಾಕಿದ್ದಾಳೆ. ತಮ್ಮಿಬ್ಬರ ಆಕ್ರಮ ಸಂಬಂಧಕ್ಕೆ ಮಗು ಅಡ್ಡಿಯಾಗುತ್ತೆ ಅಂತೇಳಿ ಹತ್ಯೆ ಮಾಡಿದ್ದು, ಗಂಡ ಕೇಳಿದ ಈ ಒಂದು ಮಾತಿನಿಂದ ಸತ್ಯ ಬಯಲಾಗಿದೆ.**

ತನ್ನ ಅಕ್ರಮ ಸಂಬಂಧಕ್ಕೆ ಅಡ್ಡಿಯಾಗುತ್ತಾಳೆ ಅಂತ ಹೇಳಿ ಪಾಪಿ ತಾಯಿ ತಾನು ಹೆತ್ತಮಗಳ ಕಥ–ಯನ್ನೇ ಮುಗಿಸಿದ್ದಾಳೆ. ಪ್ರಿಯಕರನೊಂದಿಗೆ ಸೇರಿ ತನ್ನ ಮಗಳಿಗೆ ತಾಯಿ ಚಟ್ಟಕಟ್ಟಿದ್ದಾಳೆ. ಹಾವೇರಿ ಜಿಲ್ಲೆಯ ರಾಣೇಬೆನ್ನೂರು ತಾಲೂಕಿನ ಗುಡ್ಡದ ಅನ್ವೇರಿ ಗ್ರಾಮದಲ್ಲಿ ಈ ದಾರುಣ ಘಟನೆ ನಡೆದಿದೆ. ನಾಲ್ಕು ವರ್ಷದ ಬಾಲಕಿ ಪ್ರಿಯಾಂಕಳನ್ನು ಆಕೆಯ ತಾಯಿ ಗಂಗಮ್ಮ ಮತ್ತು ಆಕೆಯ ಪ್ರಿಯಕರ ಅಣ್ಣಪ್ಪ ಮಡಿವಾಳರ್ ಒಟ್ಟಿಗೆ ಸೇರಿ ಕೊಲೆ ಮಾಡಿದ್ದಾರೆ.

ಮಗುವಿನ ಹೆತ್ತ ತಾಯಿ ಗಂಗಮ್ಮ ಮತ್ತು ಪ್ರಿಯಕರ ಅಣ್ಣಪ್ಪ ಸೇರಿ ಮಗುವನ್ನು ಕೊಂದಿರುವ ಘಟನೆ ಆಗಸ್ಟ್ 5, 2025ರಂದು ನಡೆದಿದೆ. ಈ ಘೋರ ಕೃತ್ಯದ ಬಳಿಕ ಶವವನ್ನು ತುಂಗಾಮೇಲದಂಡೆ ಕಾಲುವೆಯಲ್ಲಿ ಸುಡಲು ಯತ್ನಿಸಿದ ಆರೋಪಿಗಳನ್ನು ರಾಣೇಬೆನ್ನೂರು ಗ್ರಾಮೀಣ ಪೊಲೀಸರು ಬಂಧಿಸಿದ್ದಾರೆ.

## ರಾಜ್ಯದ ಜನತೆಗೆ ಬಿಗ್ ಶಾಕ್; 3.65 ಲಕ್ಷ ಅನರ್ಹ ಬಿಪಿಎಲ್ ಕಾರ್ಡ್ ರದ್ದು : ಸಿಎಂ ಸಿದ್ದರಾಮಯ್ಯ

❑ ಸ್ನೇಹಜೀವಿ ನ್ಯೂಸ್

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ರಾಜ್ಯದ ಜನತೆಗೆ ಬಿಗ್ ಶಾಕ್ ನೀಡಿದ್ದು,3.65 ಲಕ್ಷ ಅನರ್ಹ ಬಿಪಿಎಲ್ ಕಾರ್ಡ್ ಗಳನ್ನು ರದ್ದುಗೊಳಿಸಲಾಗಿದ್ದು,ಇನ್ನೂ ಸಾಕಷ್ಟು ಜನ ಅನರ್ಹರು ಬಿಪಿಎಲ್ ಕಾರ್ಡ್ ಹೊಂದಿದ್ದು,ಅವುಗಳನ್ನು ರದ್ದುಪಡಿಸುವಂತೆ ಖಡಕ್ ಸೂಚನೆ ನೀಡಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ




ಅವರು ಈ ಸೂಚನೆ ನೀಡಿದ್ದಾರೆ.

ಅನರ್ಹ ಬಿಪಿಎಲ್ ಕಾರ್ಡ್ ಗಳನ್ನು ರದ್ದುಪಡಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಆದರೆ ಅರ್ಹ ಬಿಪಿಎಲ್ ಕಾರ್ಡುದಾರ–ರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಅರ್ಹರು ಯಾರಾದರೂ ಬಿಟ್ಟು ಹೋಗಿದ್ದರೆ ಅವರಿಗೆ ಬಿಪಿಎಲ್ ಕಾರ್ಡ್ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಸಿಎಂ ಸೂಚಿಸಿದರು.

ಈಗಾಗಲೇ ಗುರುತಿಸಲಾಗಿರುವ ಅನರ್ಹ ಬಿಪಿಎಲ್ ಪಡಿತರ ಚೀಟಿದಾರರ ಪೈಕಿ 3,65,614 ಪಡಿತರ 4ನೇ ಪುಟ

## ಬ್ಯಾಲಟ್ ಪೇಪರ್ ಬಳಕೆ: ಸಚಿವ ಸಂಪುಟ ಒಪ್ಪಿದರೆ ಸುಗ್ರೀವಾಜ್ಞೆ-ಸಚಿವ ಎಚ್.ಕೆ ಪಾಟೀಲ್

**ಸುಗ್ರೀವಾಜ್ಞೆಗೆ ರಾಜ್ಯಪಾಲರು ಅನುಮೋದನೆ ನೀಡುವ ವಿಶ್ವಾಸವಿದೆ ಎಂದ ಅವರು, ಮತಪತ್ರ ಕಡ್ಡಾಯಗೊಳಿಸುವುದರಿಂದ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಳಂಬ ಆಗುವುದಿಲ್ಲ.**



❑ ಸ್ನೇಹಜೀವಿ ನ್ಯೂಸ್

ಬೆಂಗಳೂರು: ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಮತಪತ್ರಗಳ ಬಳಕೆಯನ್ನು ಕಡ್ಡಾಯಗೊಳಿಸುವ ಸಂಬಂಧ ರಾಜ್ಯ ಸರ್ಕಾರ ಯೋಜನೆ ರೂಪಿಸುತ್ತಿದೆ ಎಂದು ಕರ್ನಾಟಕ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಹೇಳಿದ್ದಾರೆ.

ಸ್ಥಳೀಯ ಚುನಾವಣೆಗಳಲ್ಲಿ ಮತಪತ್ರಗಳಿಗೆ ಬಳಕೆ ಮಾಡಲು ರಾಜ್ಯ ಸಚಿವ ಸಂಪುಟ ನಿರ್ಧರಿಸಿದ ಬೆನ್ನಲ್ಲೇ ಪಾಟೀಲ್ ಈ ಹೇಳಿಕೆ ನೀಡಿದ್ದಾರೆ.

ಮಾತನಾಡಿದ ಅವರು, ಕಾಯ್ದೆಗಳ ತಿದ್ದುಪಡಿಗೆ ಕರಡು ಮಸೂದೆ ಸಿದ್ಧವಾಗಿದೆ. ಇದೇ 11ರಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಿ ಚರ್ಚೆ ಮಾಡುತ್ತೇವೆ ಎಂದರು. ಸಚಿವ ಸಂಪುಟ ಒಪ್ಪಿದರೆ ಸುಗ್ರೀವಾಜ್ಞೆ ಹೊರಡಿಸುತ್ತೇವೆ ಎಂದರು.

ಸುಗ್ರೀವಾಜ್ಞೆಗೆ ರಾಜ್ಯಪಾಲರು ಅನುಮೋದನೆ ನೀಡುವ ವಿಶ್ವಾಸವಿದೆ ಎಂದ ಅವರು, ಮತಪತ್ರ ಕಡ್ಡಾಯಗೊಳಿಸುವುದರಿಂದ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಳಂಬ ಆಗುವುದಿಲ್ಲ. ಆ ಉದ್ದೇಶವೂ ಸರ್ಕಾರಕ್ಕೆ ಇಲ್ಲ ಎಂದರು.

## ವಿದ್ಯಾರ್ಥಿನಿಯ ಕಾಲೇಜು ಫೀ ಬಾಕಿ ತಾಯಿಯ ತಾಳಿಗೆ ಕೈಹಾಕಿದ ಕಾಲೇಜು ಚೇರ್ಮೆನ್!

❑ ಸ್ನೇಹಜೀವಿ ನ್ಯೂಸ್

**ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಬಿಬಿಸಿ ನರ್ಸಿಂಗ್ ಕಾಲೇಜಿನಲ್ಲಿ ಘೋರ ಘಟನೆಯೊಂದು ನಡೆದಿದ್ದು , ವೈದ್ಯ ಕೀಯ ಕಾಲೇಜುವೊಂದರ ಶುಲ್ಕದ ಬಾಕಿ ಪಾವತಿಗಾಗಿ ವಿದ್ಯಾರ್ಥಿನಿ ತಾಯಿಯ ತಾಳಿಯನ್ನು ಕಸಿದುಕೊಂಡಿರುವ ಗಂಭೀರ ಆರೋಪ ಕೇಳಿಬಂದಿದೆ.**

ಕನಕಗಿರಿ ತಾಲೂಕಿನಮುಸ್ಲಾಪೂರ ಗ್ರಾಮದ ವಿದ್ಯಾ ರ್ಥಿನಿ ಕಾವೇರಿ ವಾಲಿಕಾರ್ ಎಂಬಾಕೆ ಗಂಗಾವತಿಯ ಬಿಬಿಸಿ ನರ್ಸಿಂಗ್ ಕಾಲೇಜಿನಲ್ಲಿ ಬಿಎಸ್ಸಿ ನರ್ಸಿಂಗ್ಗೆ ಪ್ರವೇಶ ಪಡೆದಿದ್ದರು. ಪ್ರವೇಶ ಸಮಯದಲ್ಲಿ ಅವರಪೋಷಕರು 10,000 ಪಾವತಿಸಿ, ಉಳಿದ 90,000ನ್ನು ನಂತರ ನೀಡುವುದಾಗಿ ಮನವಿಮಾಡಿದ್ದರು.

ಆದರೆ ಇತ್ತೀಚೆಗೆ ಕಾವೇರಿಗೆ ಗದಗ ಸರ್ಕಾರಿ ನರ್ಸಿಂಗ್ ಕಾಲೇಜಿನಲ್ಲಿ ಸೀಟುದೊರಕಿರುವುದರಿಂದ,ಅವರು ಬಿಬಿಸಿ ಕಾಲೇಜಿನಿಂದ ಟಿಸಿ ನೀಡುವಂತೆ ಮನವಿ ಸಲ್ಲಿ ಸಿದ್ದ ರು. ಇದರಿಂದ ಸಿಟ್ಟಾದ ಕಾಲೇಜಿನ ಚೇರ್‌ಮನ್ ಡಾ. ಚಿನಿವಾಲ ಬಾಕಿ ಉಳಿದ 90 ಸಾವಿರ ಕಟ್ಟುವಂತೆ ಒತ್ತಾಯಿಸಿದ್ದಾರೆ.

ಕಡು ಬಡತನದ ನಡುವೆಯೂಮಗಳು ಡಾಕ್ಟರ್ ಓದಬೇಕು ಎಂದು ಆಸೆ ಪಟ್ಟಿದ್ದಕ್ಕೆ ತಮ್ಮ ಬಳಿ ಇರುವ ಹಣ ಒಟ್ಟು ಮಾಡಿ ಬಿಬಿಸಿ ವೈದ್ಯಕೀಯ ಕಾಲೇಜಿಗೆ ಸೇರಿಸಲಾಗಿತ್ತು.ಆದರೆ ಇದೀಗ ಅದಕ್ಕಿಂತ ಕಡಿಮೆ ಬೆಲೆಯ ಕಾಲೇಜು ಸಿಕ್ಕಿದ್ದ ರಿಂದ ಬಿಬಿಸಿ ಕಾಲೇಜಿಗೆ ತೆರಳಿ ಟಿಸಿ ನೀಡುವಂತೆ ಮನವಿಮಾಡಿದ್ದರು.

ಕುಟುಂಬದ ಆರ್ಥಿಕ ಪರಿಸ್ಥಿ ತಿಕೂಡ ಸರಿಯಿಲ್ಲ ಹೀಗಿರುವಾಗ 90 ಸಾವಿರರೂ. ಎಲ್ಲಿಂ ದ ನೀಡುವುದು ಕಷ್ಟ ವಾಗುತ್ತದೆ ಎಂದು ಕೇಳಿಕೊಂಡಿದ್ದಾರೆ. ಇದಕ್ಕೆ ಡಾ. ಚಿನಿವಾಲ, ಅದಕ್ಕೆ ನಾನೇನು ಮಾಡಲು ಆಗುವುದಿಲ್ಲ , ಹಣವಿಲ್ಲದಿದ್ದರೆ ಕುತ್ತಿಗೆಯಲ್ಲಿರುವ ತಾಳಿಯನ್ನಾ ದರೂಕೊಟ್ಟು ಹೋಗಿ ಎಂದು ಒತ್ತಾಯಿಸಿದ್ದಾರೆ ಎನ್ನಲಾಗಿದೆ.



ಬೇರೆ ದಾರಿ ಕಾಣದೇ ಕಾವೇರಿಯ ತಾಯಿ ಕುತ್ತಿ ಗೆಯಲ್ಲಿದ್ದ ತಾಳಿಯನ್ನೇ ಬಿಚ್ಚಿ ಕೊಟ್ಟು ಟಿಸಿಯನ್ನು ತೆಗೆದುಕೊಂಡು ಬಂದಿದ್ದಾರೆ. ಸದ್ಯ ಈ ಘಟನೆಯಿಂದಾಗಿ ಚೇರ್ ಮನ್ ಡಾ. ಚಿನಿವಾಲ ವಿರುದ್ಧ ವ್ಯಾ ಪಕ ಆಕ್ರೋಶ ವ್ಯಕ್ತವಾಗುತ್ತಿದ್ದು ,

ತಾಳಿಯಂತಹ ಪವಿತ್ರವಾದ ಆಭರಣವನ್ನು ಶುಲ್ಕಕ್ಕಾಗಿ ಒತ್ತೆಯಾಗಿ ಕೇಳುವ ಚೇರ್ ಮನ್ ವಿರುದ್ಧ ಸೂಕ್ತ ಕ್ರಮಕ್ಕೆ ಆಗ್ರ ಹಿಸಿದ್ದಾರೆ.

ಸದ್ಯ ಈ ಘಟನೆಗೆ ಸಂಬಂಧಪಟ್ಟಂತೆ ವ್ಯಾಪಕ ಚರ್ಚೆಗಳಾಗುತ್ತಿದ್ದು, ಈಕೂಡಲೇ ತಾಯಿಯನ್ನು ಸಂಬಂಧಪಟ್ಟ ವರಿಗೆ ಹಿಂತಿ–ರುಗಿಸಿ, ಕ್ಷಮೆ ಕೇಳುವಂತೆ ಸ್ಥ ಳೀಯರು ಆಗ್ರ ಹಿಸಿದ್ದಾರೆ. ಅದರೆ ಇದುವರೆಗೆ ಶಿಕ್ಷಣ ಸಂಸ್ಥೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಇದು ಜನರ ಕೆಂಗಣ್ಣಿ ಗೆ ಗುರಿಯಾಗಿದೆ.

ಪ್ರತ್ಯೇಕ ಘಟನೆಯಲ್ಲಿ ಕಳೆದ ವರ್ಷ ಕೊಪ್ಪಳದ ನಿವೇದಿತಾ ಖಾಸಗಿ ಶಾಲೆಯಲ್ಲಿ ಶುಲ್ಕ ಪಾವತಿಸಿಲ್ಲ ಎಂದು ಸುಮಾರು 20 ಮಕ್ಕಳನ್ನು ಮನೆಗೆ ಬಿಡದೆ ಶಾಲೆಯ ಕೋಣೆಯಲ್ಲಿ ಕೂಡಿ ಹಾಕಲಾಗಿದ್ದ ಘಟನೆ ನಡೆದಿತ್ತು.

ಶಾಲೆಯ ಅವಧಿಮುಗಿದನಂತರ ಮಕ್ಕಳನ್ನು ಮನೆಗೆ ಕಳುಹಿಸದೇ ಕೋಣೆಯಲ್ಲಿ ಬಂಧಿಸಿ, ಪಾಲಕರು ಬರುವವರೆಗೂಬಿಡಬಾರದು ಎಂಬ ಉದ್ದೇಶದಿಂದ ಕೂಡಿ ಹಾಕಿದ್ದರು ಎನ್ನಲಾಗಿದೆ.

ಪಾಲಕರು ಶಾಲೆ ಬಿಟ್ಟು ಸುಮಾರುಹೊತ್ತು ಕಳೆದರೂಮಕ್ಕಳು ಮನೆಗೆ ವಾಪಸಾಗಿಲ್ಲ ಎಂದುಪೋಷಕರು ಶಾಲೆಗೆಬಂದಿದ್ದಾರೆ. ಈ ವೇಳೆ ಮಕ್ಕಳನ್ನು ಕೋಣೆಯಲ್ಲಿ ಕೂಡಿಹಾಕಿರುವುದು ಗೊತ್ತಾಗಿದೆ. ಸದ್ಯ ಶಾಲಾ ಆಡಳಿತಮಂಡಳಿಯ ನಡೆಯ ವಿರುದ್ಧ ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಛಾಯಾಚಿತ್ರಗಳು ಜೀವನದ ಪ್ರತಿಬಿಂಬ



❑ ಸ್ನೇಹಜೀವಿ ನ್ಯೂಸ್

ಧಾರವಾಡ,ಸೆ10: ಛಾಯಾಚಿತ್ರಗಳು ಕೇವಲ ಚಿತ್ರಗಳಲ್ಲ,ಅವು ಜೀವನದ ನಿಜವಾದ ಕ್ಷಣಗಳನ್ನು,ಭಾವನೆಗಳನ್ನು ಮತ್ತು ಸಮಾಜದ ಹೃದಯ ಸ್ಪಂದನವನ್ನು ಸೆರೆ ಹಿಡಿಯುವ ಸಾಧನಗಳಾಗಿವೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ವಾರ್ತಾ ಇಲಾಖೆಯ ವಾರ್ತಾಭವನದಲ್ಲಿ ಸೆ.15 ರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಿನ್ನಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಂಂ–ಯುಕ್ತ ಆಶ್ರಯದಲ್ಲಿ ಛಾಯಾಗ್ರಾಹಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಪ್ರಜಾಪ್ರಭುತ್ವ ಕುರಿತ ಛಾಯಾಚಿತ್ರ ಸ್ಪರ್ಧೆ ಮತ್ತು ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.


ಪ್ರಜಾಪ್ರಭುತ್ವದ ಆಶಯಗಳನ್ನು ಎತ್ತಿಹಿಡಿಯುವಲ್ಲಿ ಛಾಯಾಚಿತ್ರಗಳು ಪ್ರಮುಖ ಪಾತ್ರವಹಿಸುತ್ತವೆ. ದೃಶ್ಯ ಮಾಧ್ಯಮದ ಮೂಲಕ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಜನರಿಗೆ ತಲುಪಿಸಲು ಇಂತಹ ಸ್ಪರ್ಧೆಗಳು ಸಹಕಾರಿಯಾಗಿವೆ ಎಂದು ತಿಳಿಸಿದರು.

ಸ್ಪರ್ಧೆಯು ಸ್ಥಳೀಯ ಛಾಯಾಗ್ರಾಹಕ–ರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ವೇದಿಕೆಯಾಗಿದೆ ಎಂದು ಅವರು ಹೇಳಿದರು. 4ನೇ ಪುಟ

## ಕುಡಿದು ಶಾಲಾ ವಾಹನ ಚಲಾಯಿಸಿ ಸಂಚಾರಿ ನಿಯಮ ಉಲ್ಲಂಘನೆ: ಎರಡು ಪ್ರಕರಣ ದಾಖಲು

❑ ಸ್ನೇಹಜೀವಿ ನ್ಯೂಸ್

ಕಲಬುರಗಿ,ಸೆ.10–ಕುಡಿದು ಶಾಲಾ ವಾಹನ ಚಲಾಯಿಸಿ ಸಂಚಾರಿ ನಿಯಮಗಳನ್ನು ಉಲ್ಲಂಘಿಸಿದ ಕುರಿತು ಎರಡು ಪ್ರಕರಣಗಳನ್ನು ದಾಖಲಿಸಲಾಗಿದ್ದು, ದಂಡದ ಮೊತ್ತವನ್ನು ನ್ಯಾಯಾಲಯದ ಆದೇಶದಂತೆ ಪಾವತಿಸಲು ಸೂಚಿಸಿ ನೋಟಿಸ್ ಜಾರಿಗೊಳಿಸಲಾಗಿದೆ.



ಮದ್ಯ ಸೇವನೆ ಮಾಡಿ ವಾಹನ ಚಲಾಯಿಸಿದವರ ಚಾಲನಾ ಪರವಾನಿಗೆಯನ್ನು ರದ್ದುಗೊಳಿಸಲು ಪ್ರಾದೇಶಿಕ ಸಾರಿಗೆ ಕಚೇರಿ (ಆರಟಿಒ) ಜೊತೆ ಪತ್ರ ವ್ಯವಹಾರ ನಡೆಸಲಾಗುತ್ತಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದ್ದಾರೆ.

ಸಂಚಾರಿ ಪೊಲೀಸ್ ಠಾಣೆ–2ರ ಪಿಐ ಖಾಜಾಹುಸೇನ್ ಅವರು ಶರಣಬಸವೇಶ್ವರ ವಿಶ್ವವಿದ್ಯಾಲಯದಲ್ಲಿ ಎಲ್ಲಾ ಶಾಲಾ ವಾಹನ ಚಾಲಕರ ಸಭೆ ಕರೆದು ಮದ್ಯ ಸೇವನೆ ಮಾಡಿ ಶಾಲಾ ಮಕ್ಕಳನ್ನು ಕರೆದುಕೊಂಡು ಹೋಗುವುದ–ರಿಂದ ಆಗುವ ಅನಾಹುತಗಳ ಬಗ್ಗೆ ಹಾಗೂ ಸಂಚಾರಿ ನಿಯಮಗಳ ಬಗ್ಗೆ ಅರಿವು ಮೂಡಿಸಿದ್ದು, ಮುಂಬರುವ ದಿನಗಳಲ್ಲಿಯೂ ಕುಡಿದು ಶಾಲಾ ವಾಹನ ಚಲಾಯಿಸುವವರ ವಿರುದ್ಧ ಕಾರ್ಯಾಚರಣೆ ನಡೆಯಲಿದೆ.

ಆದ್ದರಿಂದ ಆಟೋ ಚಾಲಕರು ಹಾಗೂ ಶಾಲಾ ವಾಹನ ಚಾಲಕರು ಯಾವುದೇ ರೀತಿಯ ಸಂಚಾರಿ ನಿಯಮಗಳನ್ನು ಉಲ್ಲಂಘಿಸದೆ ಕರ್ತವ್ಯ ನಿರ್ವಹಿಸಬೇಕು ಎಂದು ಅವರು ಸೂಚಿಸಿದ್ದಾರೆ.

# ರೈತರಿಗೆ ಹಗಲು ಹೊತ್ತಿನಲ್ಲೇ ಏಳು ಗಂಟೆ ವಿದ್ಯುತ್: ಸಚಿವ ಕೆ.ಜೆ ಜಾರ್ಜ್

## ಇಂಧನ ಇಲಾಖೆ ಅಧಿಕಾರಿಗಳು, ಜನಪ್ರತಿನಿಧಿಗಳ ಜೊತೆ ಪ್ರಗತಿ ಪರಿಶೀಲನಾ ಸಭೆ




❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 10: ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ಹೊತ್ತಿನಲ್ಲಿಯೇ ನಿರಂತರ ಏಳು ಗಂಟೆಗಳ ಕಾಲ ವಿದ್ಯುತ್ ನೀಡುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಕುಸುಮ್– ಬಿ ಹಾಗೂ ಕುಸುಮ್– ಸಿ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್ ಅವರು ಹೇಳಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಇಂಧನ ಇಲಾಖೆಗೆ ಸಂಬಂಧಿಸಿದಂತೆ ಜಿಲ್ಲೆಯ ಜನಪ್ರತಿನಿಧಿಗಳು ಮತ್ತು ಅಧಿಕಾ–ರಿಗಳೊಂದಿಗಿನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿದ್ಯುತ್ ಮಾರ್ಗ ಜಾಲದಿಂದ 500 ಮೀ. ವ್ಯಾಪ್ತಿಯ ಹೊರಗಿರುವ ಪಂಸೆಟ್‌ಗಳಿಗೆ ಕುಸುಮ್– ಬಿ ಯೋಜನೆಯಡಿ ಸೋಲಾರ್ ವಿದ್ಯುತ್ ಕಲ್ಪಿಸಲಾಗುವುದು. ಈ ಯೋಜನೆಗೆ ನಮ್ಮ ಸರ್ಕಾರದಿಂದ ನೀಡಲಾಗುವ ಸಬ್ಸಿಡಿಯನ್ನು ಶೇ.30 ರಿಂದ ಶೇ 50 ಕ್ಕೆ ಹೆಚ್ಚಳ ಮಾಡಿದೆ. ಅದೇ ರೀತಿ ಕುಸುಮ್– ಸಿ ಯೋಜನೆಯಡಿ ಕೃಷಿ ಫೀಡರ್ ಗಳ ಸೌರೀಕರಣ ಕಾರ್ಯ ನಡೆಯುತ್ತಿದ್ದು, ಇದರಿಂದಾಗಿ ಹಗಲು ವೇಳೆ ರೈತ ಕೃಷಿ ಪಂಪ್ ಸೆಟ್ ಗಳಿಗೆ 7 ಗಂಟೆ ವಿದ್ಯುತ್ ಪೂರೈಸಲು ಸಾಧ್ಯವಾಗುತ್ತದೆ ಎಂದರು.

2023ರಲ್ಲಿ ರಾಜ್ಯದಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗ 4.5 ಲಕ್ಷ ಅಕ್ರಮ ಕೃಷಿ ಪಂಪ್‌ಸೆಟ್‌ಗಳು ಇದ್ದವು. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ನಮ್ಮ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ 2.5 ಲಕ್ಷ ಅಕ್ರಮ ಕೃಷಿ ಪಂಪ್ ಸೆಟ್ ಗಳನ್ನು ಸಕ್ರಮಗೊಳಿಸಿ ಮೂಲ ಸೌರ್ಯ ಒದಗಿಸಲಾಗಿದೆ. ಇನ್ನೊಂದು ವರ್ಷದಲ್ಲಿ ಉಳಿದ ಪಂಪ್ ಸೆಟ್ ಗಳನ್ನೂ ಸಕ್ರಮಗೊಳಿಸುವ ಕಾರ್ಯ ಪೂರ್ಣಗೊಳ್ಳಲಿವೆ. ಇದರ ಜತೆಗೆ ತ್ವರಿತವಾಗಿ ವಿದ್ಯುತ್ ಸಂಪರ್ಕ ಪಡೆಯಲು ಬಯಸಿದ ರೈತರಿಗಾಗಿ ನವೀಕೃತ ಶೀಘ್ರ ಸಂಪರ್ಕ ಯೋಜನೆ ಜಾರಿಗೆ ತಂದಿದ್ದೇವೆ. ರೈತರು ಸ್ವಂತ ಖರ್ಚಿನಲ್ಲಿ ವಿದ್ಯುತ್ ಜಾಲ ಸೇ–ರಿದಂತೆ ಮೂಲ ಸೌಕರ್ಯ ಕಲ್ಪಿಸಿಕೊಂಡರೆ ಎಸ್ಕಾಂಗಳಿಂದ ಟ್ರಾನ್ಸ್ ಫಾರ್ಮರ್ ಗಳನ್ನು ನೀಡಲಾಗುತ್ತಿದೆ ಎಂದು ಸಚಿವ ಕೆ ಜೆ ಜಾರ್ಜ್ ತಿಳಿಸಿದರು.

ವಿದ್ಯುತ್ ಕೊರತೆಯಿಲ್ಲ : ನಮ್ಮ ಸರ್ಕಾರದ ಅಧಿಕಾರಾವಧಿಯಲ್ಲಿ ಕೇವಲ ಒಂದು ತಿಂಗಳು ಮಾತ್ರ ವಿದ್ಯುತ್ ಕೊರತೆ ಉಂಟಾಗಿತ್ತು. ಉತ್ತರ ಪ್ರದೇಶ ಹಾಗೂ ಪಂಜಾಬ್ ರಾಜ್ಯಗಳಿಂದ ವಿನಿಮಯ ಆದ–ಾರದ ಮೇಲೆ ವಿದ್ಯುತ್ ಪಡೆದು ಸಮಸ್ಯೆ ಬಗೆಹರಿಸಲಾಗಿತ್ತು. ಸದ್ಯ ನಮ್ಮಲ್ಲಿ ವಿದ್ಯುತ್ ಕೊರತೆಯಿಲ್ಲ. ರೈತರಿಗೆ ನಿರಂತವಾಗಿ ವಿದ್ಯುತ್ ಕಲ್ಪಿಸುವ ಉದ್ದೇಶದಿಂದ ಹೆಚ್ಚು ವಿದ್ಯುತ್ ಉತ್ಪಾದನೆಗೆ ಆದ್ಯತೆ ನೀಡಲಾಗುತ್ತಿದೆ ಎಂದು ಹೇಳಿದರು.

ಸಮರ್ಪಕ ವಿದ್ಯುತ್ ಪೂರೈಕೆಗಾಗಿ ರಾಜ್ಯದಲ್ಲಿ ಮೂಲ ಸೌಕರ್ಯ ಹೆಚ್ಚಿಸಲಾಗುತ್ತಿದ್ದು, ಕೆಪಿಟಿಸಿಎಲ್ ವತಿಯಿಂದ ಹೊಸದಾಗಿ 100 ವಿದ್ಯುತ್ ಉಪಕೇಂದ್ರಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಪ್ರತಿ ವರ್ಷವೂ ಹೆಚ್ಚೆಚ್ಚು ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಲು ಯೋಜಿಸಲಾಗಿದೆ. ಪವನ ಹಾಗೂ ಸೌರ ವಿದ್ಯುತ್‌ನ್ನು ಬ್ಯಾಟರಿ ಮೂಲಕ ಸಂಗ್ರಹ ಮಾಡುವ ಕೆಲಸವನ್ನು ಮಾಡಲಾಗುತ್ತಿದೆ ಎಂದರು.

ರೈತರ ಪಂಪ್‌ಸೆಟ್‌ಗಳಿಗೆ ಸುಲಭ ಮತ್ತು ಸಮರ್ಪಕ ವಿದ್ಯುತ್ ಸರಬರಾಜು ದೃಷ್ಟಿಯಿಂದ ಬೇಡಿಕೆ ಇರುವಷ್ಟು ಟ್ರಾನ್ಸ್‌ಫಾರ್ಮರ್ ಗಳನ್ನು ಪೂರೈಸಲಾಗುವುದು. ಇದಕ್ಕಾಗಿ ಟ್ರಾನ್ಸ್‌ಫಾರ್ಮರ್ ಬ್ಯಾಂಕ್ ಮಾಡಿದ್ದೇವೆ. ರೈತರಿಗೆ ಹೊರೆಯಾಗದಂತೆ ಇಲಾಖೆಯ ವಾಹನದಲ್ಲಿಯೇ ಟ್ರಾನ್ಸ್‌ಫಾರ್ಮರ್ ಸಾಗಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

3000 ಪವರ್‌ಮೆನ್‌ಗಳ ನೇಮಕಾತಿ: ಇಂಧನ ಇಲಾಖೆಯ 3 ಸಾವಿರ ಲೈಮಗಳ ನೇಮಕಾತಿ ಪ್ರಕ್ರಿಯೆ ಇನ್ನೊಂದು ತಿಂಗಳಿನಲ್ಲಿ ಪೂರ್ಣಗೊಳ್ಳಲಿದೆ. ಲೈನ್‌ಮೆನ್‌ಗಳು ಮನಸ್ಸು ಮಾಡಿದರೆ ಏನು ಬೇಕಾದನ್ನು ಸಾಧಿಸಬಹುದು ಎಂಬುದನ್ನು ಅವರು ಈಗಾಗಲೇ ನಿರೂಪಿಸಿದ್ದಾರೆ. ಮಳೆ–ಗಾಳಿಯಿಂದ ಸಮಸ್ಯೆಯಾದಾಗ ತ್ವರಿತವಾಗಿ ಸ್ಪಂದಿಸಿ ವಿದ್ಯುತ್ ಪೂರೈಕೆ ಪುನಃಸ್ಥಾಪಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗೃಹ ಜ್ಯೋತಿ 99% ಸಾಧನೆ: ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆ ಗೃಹ ಜ್ಯೋತಿ ರಾಜ್ಯದಲ್ಲಿ ಶೇ. 99ರಷ್ಟು ಸಾಧನೆಯಾಗಿದೆ. ಗದಗ ಜಿಲ್ಲೆಯಲ್ಲಿ ಒಟ್ಟು ಶೇ. 98.49ರಷ್ಟು ಸಾಧನೆ ಮಾಡಲಾಗಿದೆ. ಗದಗ ನಗರದಲ್ಲಿ ಶೇ. 99.47, ಗ್ರಾಮೀಣ ಭಾಗದಲ್ಲಿ ಶೇ. 99.45ರಷ್ಟು ಸಾಧನೆಯಾಗಿದೆ ಇದು ಹೆಮ್ಮಪಡುವ ವಿಷಯ ಎಂದರು.

**ರೈತರಿಗೆ ಶೇ. 10 ಪಾಲುದಾರಿಕೆಗೆ ಮನವಿ**

ಸಚಿವ ಎಚ್.ಕೆ.ಪಾಟೀಲ ಅವರು ಮಾತನಾಡಿ, ಗದಗ ಜಿಲ್ಲೆಯಲ್ಲಿ ಪವನ ಹಾಗೂ ಸೌರ ವಿದ್ಯುತ್ ಉತ್ಪಾದನೆಗೆ ಹೆಚ್ಚಿನ ಅವಕಾಶ ಇದೆ. ಇದರ ಲಾಭ ಇಲ್ಲಿನ ರೈತರಿಗೆ ಸಿಗುವಂತಾಗಬೇಕು. ಈ ಯೋಜನೆಗಳಿಗೆ ಜಮೀನು ನೀಡುವ ರೈತರಿಗೆ ಯೋಜನೆಯಲ್ಲಿ ಶೇ. 10ರಷ್ಟು ಪಾಲುದಾ–ರಿಕೆ ನೀಡಬೇಕು. ವಿದ್ಯುತ್ ಉತ್ಪಾದಿಸುವ ಉತ್ತರ ಕನ್ನಡ ಜಿಲ್ಲೆಗೆ ಈ ಹಿಂದೆ ಕೆಲವು ರಿಯಾಯತಿ ನೀಡಲಾಗುತ್ತಿತ್ತು. ಅದೇ ರೀತಿ ಗದಗ ಜಿಲ್ಲೆಗೂ ರಿಯಾಯತಿ ಸಿಗಬೇಕು ಎಂದರು.

ಗದಗ ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಮಳೆಯಿಂದಾಗಿ ಕೆಲವೆಡೆ ವಿದ್ಯುತ್ ಕಂಬ, ತಂತಿಗಳು ವಾಲಿವೆ. ಅವುಗಳನ್ನು ಸರಿಪಡಿಸಬೇಕು. ಪರೀಕ್ಷಾ ಸಂದರ್ಭದಲ್ಲಿ ರಾತ್ರಿ ಹೊತ್ತಿನಲ್ಲಿ ವಿದ್ಯುತ್ ನೀಡಬೇಕು ಎಂದು ನರಗುಂದ ಶಾಸಕ ಸಿ.ಸಿ ಪಾಟೀಲ ಹೇಳಿದರು.

ರೋಣ ಶಾಸಕ ಜಿ.ಎಸ್ ಪಾಟೀಲ ಮಾತನಾಡಿ, ರಾತ್ರಿ ಹೊತ್ತಿನಲ್ಲಿ ತೋಟದ ಮನೆಗಳಿಗೆ ಸಿಂಗಲ್ ಫೇಸ್ ನಿರಂತರ ವಿದ್ಯುತ್ ನೀಡಬೇಕು. 24 ಗಂಟೆಯೊಳಗೆ ರೈತರಿಗೆ ಟ್ರಾನ್ಸ್‌ಫಾರ್ಮರ್ ಸಿಗುವಂತಾಗಬೇಕು ಎಂದರು.

ಹೆಸ್ಕಾಂ ಅಧ್ಯಕ್ಷ ಸೈಯದ್ ಅಜೀಮ್ ಫೀರ್ ಎಸ್. ಖಾದ್ರಿ, ಕೆ.ಪಿ.ಟಿ.ಸಿ.ಎಲ್. ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ ಪಾಂಡೆ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ ಬಿ ಅಸೂಟಿ ಸೇರಿದಂತೆ ಹೆಸ್ಕಾಂ, ಕೆ.ಪಿ.ಟಿ.ಸಿ.ಎಲ್ ಅಧಿಕಾರಿಗಳು ಇದ್ದರು. ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕಿ ವೈಶಾಲಿ ಎಂ.ಎಲ್. ಅವರು ಅತಿಥಿಗಳನ್ನು ಸ್ವಾಗತಿಸಿ, ಸಭೆ ನಿರ್ವಹಿಸಿದರು.

# ಇಂಧನ ಸಚಿವ ಕೆ.ಜೆ.ಜಾರ್ಜ್ ಅವರಿಂದ ನೂತನ ಕಟ್ಟಡದ ಅಡಿಗಲ್ಲು ಸಮಾರಂಭ



❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 10 : ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದಿಂದ ಗದಗ ನಗರದ ಹುಬ್ಬಳ್ಳಿ ರಸ್ತೆಯಲ್ಲಿರುವ ಕೆಪಿಟಿಸಿ–ಎಲ್ 220 ಕೆ.ವಿ.ಸ್ಟೇಷನ್ ಆವರಣದಲ್ಲಿ ಗದಗ ಜಿಲ್ಲಾ ಕಾರ್ಯ ಮತ್ತು ಪಾಲನಾ ವೃತ್ತ ಕಛೇರಿಯ ನೂತನ ಕಟ್ಟಡದ ಅಡಿಗಲ್ಲು ಸಮಾರಂಭವನ್ನು ಬುಧವಾರ ರಾಜ್ಯದ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ಅಡಿಗಲ್ಲು ನೆರವೇರಿಸಿದರು.

ಈ ಸಂದರ್ಭದಲ್ಲಿ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ ಅಜ್ಜಂಪೀರ್ ಎಸ್ ಖಾದ್ರಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿಬಿ ಅಸೂಟಿ, ತಾಲೂಕು ಮಟ್ಟದ ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಮಾಜಿ ಶಾಸಕ ಡಿ ಆರ್ ಪಾಟೀಲ, ಕವಿಪ್ರನಿನಿ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಹುಬ್ಬಳ್ಳಿ ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕಿ ಶ್ರೀಮತಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ ವರಿಷ್ಟಾಧಿಕಾರಿ ರೋಹನ ಜಗದೀಶ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್, ಹುಬ್ಬಳ್ಳಿ ಹೆಸ್ಕಾಂ ನಿರ್ದೇಶಕ (ತಾಂತ್ರಿಕ) ಎಸ್.ಜಗದೀಶ್, ಹುಬ್ಬಳ್ಳಿ ಹೆಸ್ಕಾಂ ನಿರ್ದೇಶಕ (ಹಣಕಾಸು) ಪ್ರಕಾಶ ಪಾಟೀಲ ಗಣ್ಯರು, ಹಿರಿಯರು ಇಲಾಖೆ ಅಧಿಕಾರಿ ಸಿಬ್ಬಂದಿಗಳು ಹಾಜರಿದ್ದರು.

# ರಾಜೇಶ್ವರಿ ಹಿರೇಮಠ ಅವರಿಗೆ ಆದರ್ಶ ಶಿಕ್ಷಕ ರತ್ನ ರಾಷ್ಟ್ರೀಯ ಪ್ರಶಸ್ತಿ



❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 10 : ಗದಗ ನಗರದ ಶಿಕ್ಷಕಿ ಶ್ರೀಮತಿ ರಾಜೇಶ್ವರಿ ಎ. ಹಿರೇಮಠ ಅವರಿಗೆ ಧಾರವಾಡದ ಚೇತನ ಫೌಂಡೇಶನ್, ಧಾರವಾಡದ ಅಪ್ನಾ ದೇಶ ಫೌಂಡೇಶನ್, ಗದುಗಿನ ಅಶ್ವಿನಿ ಪ್ರಕಾಶನ, ಕಾವ್ಯಶ್ರೀ ಚಾರಿಟೇಬಲ್ ಟ್ರಸ್ಟ್ ಕರ್ನಾಟಕ, ಬಿ.ಜಿ.ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ, ವಿಶ್ವಾಸ ಫೌಂಡೇಶನ್‌ದ ಆದರ್ಶ ಶಿಕ್ಷಕಿ ಪ್ರಶಸ್ತಿ ನೀಡಿ ಗೌರವಿಸಿದೆ.

ನಗರದ ಲಯನ್ಸ್ ಕ್ಲಬ್ ಸಭಾಂಗಣದಲ್ಲಿ ಶಿಕ್ಷಕರ ದಿನಾಚರಣೆ ಕವಿಗೋಷ್ಠಿ ಸಮಾರಂಭದಲ್ಲಿ ನರಸಾಪೂರದ ಮಂಜು ಶಿಕ್ಷನ ಸಂಸ್ಥೆಯ ಬುದ್ಧಿಮಾಂಧ್ಯ ಮಕ್ಕಳ ಶಾಲೆಯಲ್ಲಿ ವಿಶೇಷ ಶಿಕ್ಷಕಿಂ–ಯಾಗಿ ಸೇವೆ ಸಲ್ಲಿಸುತ್ತಿರುವ ರಾಜೇಶ್ವರಿ ಹಿರೇಮಠ ಅವರಿಗೆ 'ಗದಗ ನುಡಿ ಸಡಗರ' ಕಾರ್ಯಕ್ರಮದಲ್ಲಿ ಶಿಕ್ಷಣ ಸಂತ ಶ್ರೀ ಲಿಂ. ಬಿ.ಜಿ.ಅಣ್ಣಿಗೇರಿ ಆದರ್ಶ ಶಿಕ್ಷಕಿ ರಾಷ್ಟ್ರೀಯ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಸಮಾರಂಭದಲ್ಲಿ ಅತಿಥಿ ಮಹೋದಯರು, ವಿವಿದ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಲಯನ್ಸ್ ಕ್ಲಬ್–ಮಹೇಶ್ವರಿ ಮಹಿಳಾ ಮಂಡಳದಿಂದ ಸಾಕ್ಷರತಾ ದಿನಾಚರಣೆ

# ಅನಕ್ಷರಸ್ಥರನ್ನು ಸಾಕ್ಷರರನ್ನಾಗಿಸಲು ಯುವಕರು ಮುಂದೆಬರಬೇಕು : ವೇರ್ಣೆಕರ

❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 10 : ಸಾಕ್ಷರತೆಯು ಓದು–ಬರಹ ಸಂವಹನ ನಿರ್ಣಾಯಕ ಚಿಂತನೆಯೊಂದಿಗೆ ಸಮಾಜದಲ್ಲಿ ಭಾಗವಹಿಸುವ ಸಾಮರ್ಥ್ಯವನ್ನು ಒಳಗೊಂಡಿದೆ. ದೇಶದ ಜನಸಂಖ್ಯೆಯಲ್ಲಿ ಅನಕ್ಷರಸ್ಥರ ಸಂಖ್ಯೆ ಹೆಚ್ಚಿದ್ದು ವಿದ್ಯಾವಂತರು ಇವರನ್ನು ಸಾಕ್ಷರರನ್ನಾಗಿ ಮಾಡಬೇಕಾದ ಗುರಿ ಹೊಂದಬೇಕು ಎಂದು ಗದಗ ಬೆಟಗೇರಿ ಲಯನ್ಸ್ ಕ್ಲಬ್‌ನ ಅಧ್ಯಕ್ಷ ರಾಜು ವೇರ್ಣೆಕರ ಹೇಳಿದರು.

ಅವರು ಗದಗ ಬೆಟಗೇರಿ ಲಯನ್ಸ್ ಕ್ಲಬ್ ಹಾಗೂ ಗದುಗಿನ ಮಹೇಶ್ವರಿ ವಿವಿದ್ಧೋದ್ದೇಶಗಳ ಮಹಿಳಾ ಮಂಡಳ ಆಶ್ರಯದಲ್ಲಿ ಜರುಗಿದ ವಿಶ್ವ ಸಾಕ್ಷರತಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಬಡತನ, ಲಿಂಗ ಸಮಾನತೆ, ನಾವೀನ್ಯತೆ ಮತ್ತು ಸಾಮಾಜಿಕ ಪ್ರಗತಿಗೆ ಅಡಿಪಾಯವಾಗಿ ಸಾಕ್ಷರತೆ ಕಾರ್ಯ ನಿರ್ವಹಿಸುತ್ತದೆ. ಸಾಕ್ಷರತಾ ದಿನಚರಣೆ ಇಂದು ಅರ್ಥಪೂರ್ಣವಾಗಿ ಸಾಧನೆ ಸಾಧಿಸಿದೆ ಎಂದರು. ಮನುಷ್ಯನ ಬುದ್ಧಿವಂತಿಕೆ, ಜ್ಞಾನ ಹೆಚ್ಚಿಸಲು ಸಾಕ್ಷರತೆ ಒಂದು ಶಕ್ತಿಯುತ ಸಾಧನವಾಗಿದ್ದು ಮಹಿಳಾ ಸಾಕ್ಷರತಾ ಹೆಚ್ಚಿಸಲು ನಾವೆಲ್ಲರೂ ಶ್ರಮಿಸಬೇಕು ಎಂದರು.

ಕ್ಲಬ್‌ನ ಕಾರ್ಯದರ್ಶಿ ರಾಜಣ್ಣ ಮಲ್ಲಾಡದ ಮಾತನಾಡಿ ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ. ಮಹಿಳೆ ತಾನು ಅನಕ್ಷರಸ್ಥೆ ಆಗಿದ್ದರೂ ಸಹ ಕುಟುಂಬವನ್ನು ಸಾಕ್ಷರರನ್ನಾಗಿ ಮಾಡುತ್ತಿರುವದು ಅಭಿನಂದನೀಯ. ಮಹಿಳಾ ಸಮುದಾಯ ಶಿಕ್ಷಣಕ್ಕೆ ಒತ್ತು ನೀಡಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಅಮೃತಾ ವಾರಕರ ಸಾಕ್ಷರತೆ ಎನ್ನುವುದು ಕೇವಲ ಓದು–ಬರಹಕ್ಕೆ ಸೀಮಿತವಾಗಿಲ್ಲ. ಜೀವನದ ಎಲ್ಲ ಸ್ಥರಗಳನ್ನು ಓದುವ–ತಿಳಿಯುವ, ಅರಿತುಕೊಳ್ಳುವುದು ಆಗಿದೆ. ಅನಕ್ಷರಸ್ಥರಿಗೆ ನಾವೆಲ್ಲರೂ ಸ್ವಯಂ ಪ್ರೇರಣೆಯಿಂದ ಅಕ್ಷರಗಳನ್ನು ಕಲಿಸುವ ಕೆಲಸ ನಡೆಸಬೇಕಿದೆ ಎಂದರು.

ಕ್ಲಬ್‌ನ ಖಜಾಂಚಿ ರೇಣುಕಪ್ರಸಾದ ಹಿರೇಮಠ ಮಾತನಾಡಿ ನಮ್ಮ ಹಳ್ಳಿಯ ಕೃಷಿಕರು ಅನಕ್ಷರಸ್ಥರಾಗಿದ್ದರೂ ಮಕ್ಕಳನ್ನು ಉನ್ನತ ಸ್ಥಾನಗಳಲ್ಲಿ ಇರುವಂತೆ ಮಾಡಿದ್ದಾರೆ. ಅನೇಕ ಕಡೆ ಇನ್ನೂ ಅನಕ್ಷರತೆ ಮನೆಮಾಡಿದ್ದು ಸಂಘ–ಸಂಸ್ಥೆಗಳು, ಯುವಕ–ಯುವತಿ ಮಂಡಳಗಳು ಸ್ವಯಂ ಪ್ರೇರಿತರಾಗಿ ರಾತ್ರಿ ಶಾಲೆಗಳನ್ನು ತೆರೆದು ಅನಕ್ಷರಸ್ಥರಿಗೆ ಅಕ್ಷರಗಳನ್ನು ಕಲಿಸಿ ಅವರನ್ನು ನವಸಾಕ್ಷರರನ್ನಾಗಿ ಮಾಡುವ ಕೆಲಸಕ್ಕೆ ಸರ್ಕಾರದೊಂದಿಗೆ ಕೈ ಜೋಡಿಸಬೇಕು ಎಂದರು.



ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹೇಶ್ವರಿ ವಿವಿದ್ಧೋದ್ದೇಶಗಳ ಮಹಿಳಾ ಮಂಡಳದ ಅಧ್ಯಕ್ಷೆ ಶ್ರೀಮತಿ ಜಯಶ್ರೀ ಹಿರೇಮಠ ಸಾಕ್ಷರತೆ ಸಾಧನೆಯಾಗಲು ಮುತುವರ್ಜಿ ಅವಶ್ಯವಿದೆ. ಪ್ರೇರಣಾದಾಯಕವಾಗಿ ಕಲಿಕೆ ನಡೆಯಬೇಕು. ನಮ್ಮ ಸುತ್ತ ಮುತ್ತಲಿನ ಪರಿಸರದಲ್ಲಿನ ಅನಕ್ಷರಸ್ಥರನ್ನು ಸಾಕ್ಷರರನ್ನಾಗಿ ಮಾಡುವಲ್ಲಿ ಯುವ ಸಮುದಾಯ ಮುಂದೆ ಬರಬೇಕು, ಅಂದಾಗ ಸಾಕ್ಷರತೆ ಸಕಾರಗೊಳ್ಳುವುದು ಎಂದರು.

ಮಹೇಶ್ವರಿ ವಿವಿದ್ಧೋದ್ದೇಶಗಳ ಮಹಿಳಾ ಮಂಡಳದಿಂದ ಜರುಗಿದ ವಿವಿಧ ತರಬೇತಿಗಳ ಪ್ರಮಾಣ ಪತ್ರಗಳನ್ನು ಫಲಾನುಭವಿಗಳಿಗೆ ನೀಡಲಾಯಿತು.

ಸಹನಾ ಹಿರೇಮಠ, ಸುರೇಖಾ ಮಲ್ಲಾಡದ ಪ್ರಾರ್ಥಿಸಿದರು. ಪುಷ್ಪಾ ಮುನವಳ್ಳಿ ಸ್ವಾಗತಿಸಿದರು. ಕವಿತಾ ಬೇಲೇರಿ ಪರಿಚಯಿಸಿದರು. ರಶ್ಮೀಕಾ ಹಿರೇಮಠ ನಿರ್ವಹಿಸಿದರು. ರೇಣುಕಾ ಹಂದ್ರಾಳ ನಿರೂಪಿಸಿದರು. ವಿರೇಶ ಪಟ್ಟಣಶೆಟ್ಟಿ ವಂದಿಸಿದರು.

ಕಾರ್ಯಕ್ರಮದಲ್ಲಿ ಕ್ಲಬ್‌ನ ಸಾವಿತ್ರಿ ಶಿಗ್ಲಿ, ನಿತೀಶ ಸಾಲಿ, ರಾಹುಲ ಅರಳಿ, ಪೂಜಾ ಅರಳಿ, ಡಾ. ಶಾಂತ ಕುಂಬಾರ, ಮಂಜುನಾಥ ವೀರಲಿಂಗಯ್ಯನಮಠ ಮತ್ತು ಲಲಿತಾ ಸಂಗನಾಳ, ತಸ್ಲೀಮ ಸೊರಟೂರ, ವೀಣಾ ಬೈಲಿ ಮುಂತಾದವರು ಉಪಸ್ಥಿತರಿದ್ದರು.

## ಪೂರ್ವಭಾವಿ ಸಭೆ ಮುಂದೂಡಿಕೆ

ಬೆಟಗೇರಿ 10 ಬೆಟಗೇರಿಯಲ್ಲಿ ಗಾಂಧೀಜಿ, ಲಾಲಬಹದ್ದೂರ ಶಾಸ್ತ್ರೀಜಿ ಜಯಂತಿ ಹಾಗೂ ರಾಜ್ಯೋತ್ಸವ ಪೂರ್ವಭಾವಿ ಸಭೆ ದಿ. 11 ರಂದು ಮುಂಜಾನೆ 11 ಗಂಟೆಗೆ ಆಯೋಜಿಸಲಾಗಿತ್ತು. ಆ ವೇಳೆ ವೀರ ಯೋಧ ಹಿರೇಕೊಪ್ಪದ ಮಂಜುನಾಥ ಗಿಡ್ಡಮಲ್ಲನವರ ಪಾರ್ಥಿವ ಶರೀರ ಆಗಮಿಸುತ್ತಿರುವದ–ರಿಂದ ಪೂರ್ವಭಾವಿ ಸಭೆ ಮುಂದೂಡಲಾಗಿದೆ ಎಂದು ರಾಜ್ಯೋತ್ಸವ ಸಮಿತಿ ಅಧ್ಯಕ್ಷ ಗಣೇಶಸಿಂಗ್ ಬ್ಯಾಳಿ ತಿಳಿಸಿದ್ದಾರೆ.

# ಅಕ್ರಮ ಗಣಿಗಾರಿಕೆ ಸಂಪತ್ತು ವಸೂಲಾತಿ ಆಯುಕ್ತರ ನೇಮಕಕ್ಕೆ ಸರ್ಕಾರ ಗೆಜೆಟ್

❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 10 : ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆಯಿಂದ ಉತ್ಪತ್ತಿಯಾದ ಅಂದಾಜು 78 ಸಾವಿರ ಕೋಟಿ ಮೊತ್ತವನ್ನು ವಸೂಲಿ ಮಾಡಲು ರಾಜ್ಯ ಸರ್ಕಾರ ಸೆ.9 ರಂದು ಗೆಜೆಟ್ ಹೊರಡಿಸಿದೆ. ಸರ್ಕಾರದ ಕಾರ್ಯದರ್ಶಿ ಸಮಾನಾಂತರ ಅಧಿಕಾರಿಯನ್ನು ಆಯುಕ್ತರಾಗಿ ನೇಮಕ ಮಾಡಲಾಗುವುದು ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಗದಗ ನಗರದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಕ್ರಮ ಗಣಿಗಾರಿಕೆ ಮತ್ತು ಅಪರಾಧ ಉತ್ಪತ್ತಿಯಿಂದ ಸ್ವತ್ತು ವಸೂಲಾತಿ ಮತ್ತು ಜಪ್ತಿಗೆ ಆಯುಕ್ತರ ನೇಮಕದ ಕುರಿತು ಗೆಜೆಟ್ ಹೊರಡಿಸಲಾಗಿದೆ. ಆಯುಕ್ತರ ನೇಮಕ ಕುರಿತು




ವಿಧಾನಸಭೆ ಮತ್ತು ವಿಧಾನ ಪರಿಷತ್ ನಲ್ಲಿ ಮಸೂದೆ ಮಂಡನೆ ಆಗಿತ್ತು. ಸೆ.9 ರಂದು ಮಂಗಳವಾರ ರಾಜ್ಯಪಾಲರು ಮಸೂದೆ ಕರಡು ಪ್ರತಿಗೆ ಅಂಕಿತ ಹಾಕಿದ್ದಾರೆ. ತದ ನಂತರ ಸರ್ಕಾರ ಶ್ರೀಘ್ರದಲ್ಲಿ ಗೆಜೆಟ್ ಹೊರಡಿಸಿದೆ. ಈ ಕಾನೂನಿಂದ ಆರ್ಥಿಕ ಶಿಸ್ತು ಪಾಲನೆ ಮಾಡಿದಂತೆ ಆಗುತ್ತದೆ ಎಂದರು.

ರಾಜ್ಯದಲ್ಲಿ 2009 – 10ರ ಅವಧಿಯಲ್ಲಿ 12000 ಕೋಟಿ ರೂ. ಮೊತ್ತದ ಅಕ್ರಮ ಗಣಿಗಾರಿಕೆ ನಡೆದಿದೆ ಎಂದು ಅಂದಾಜಿಸಲಾಗಿತ್ತು. ಪ್ರಸ್ತುತ ಅಕ್ರಮ ಗಣಿ ಸಂಪತ್ತಿನ ಬೆಲೆ 78000 ಕೋಟಿ ರೂ. ಆಗಬಹುದು ಎಂದು ಸಚಿವ ಸಂಪುಟ ಸಭೆಯಲ್ಲಿ ಅಂದಾಜಿಸಲಾಗಿತ್ತು. ಈಗ ಒಂದು ಲಕ್ಷ ಕೋಟಿಗೂ ಅಧಿಕ ಸಂಪತ್ತು ಲೂಟಿ ಆಗಿದೆ ಎಂದು ಆರೋಪಿಸಿದರು.

ಅಕ್ರಮ ಗಣಿ ಸಂಪತ್ತು ವಸೂಲಾತಿಗಾಗಿ ಕಳೆದ ಜು. 5 ರಂದು ಸಚಿವ ಸಂಪುಟದ ಉಪ ಸಮಿತಿ ಅಧ್ಯಕ್ಷನಾಗಿ ನನ್ನನ್ನು ನೇಮಕ ಮಾಡಲಾಗಿತ್ತು. ಅದರ ಭಾಗವಾಗಿ ಆ. 8 ರಂದು ಸಮಿತಿಯು ವರದಿ ಪೂರ್ಣ ಗೊಳಿಸಿ ಆ. 12ಕ್ಕೆ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಯಿತು. ಆ.14 ರಂದು ಸಚಿವ ಸಂಪುಟ ಸಭೆಯಲ್ಲಿ ವರದಿ ಯಥಾವತ್ತಾಗಿ ಸ್ವೀಕರಿಸಲಾಯಿತು. ಮುಂದುವರಿದು ಈಗ ಗೆಜೆಟ್ ಪ್ರಕಟನೆಗೊಂಡು ಕಾನೂನು ಜಾರಿ ಆಗಿದೆ ಎಂದರು.

ಈ ವೇಳೆ ಇಂಧನ ಸಚಿವ ಕೆ.ಜೆ. ಜಾರ್ಜ, ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ ಆರ್ ಪಾಟೀಲ, ಬಿ.ಬಿ. ಅಸೂಟಿ ಇತರರು ಇದ್ದರು.

# ಜಿಲ್ಲಾ ಮಟ್ಟದ ಮ್ಯಾರಾಥಾನ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ

❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 10 : ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕರ್ನಾಟಕ ರಾಜ್ಯ ಏಡ್ಸ್ ಪ್ರೀವೇನ್‌ಷನ್ ಸೋಸೈಟಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಐ.ಎಮ್.ಎ, ರೋಟರಿ ಸೆಂಟ್ರಲ್ ಗದಗ, ಲಾಯನ್ಸ್ ಕ್ಲಬ್ ಗದಗ-ಬೆಟಗೇರಿ, ಶಿಕ್ಷಣ ಇಲಾಖೆ, ಕ್ರೀಡಾ ಇಲಾಖೆ, ರಕ್ಷಣೆ ಸಂಸ್ಥೆ, ಸೃಷ್ಟಿ ಸಂಕುಲ ಸಂಸ್ಥೆ, ಚೈತನ್ಯ ಸಂಸ್ಥೆ, ನವಚೇತನ ಸಂಸ್ಥೆ, ಗದಗ ಜಿಲ್ಲೆಯ ಎನ್.ಎಸ್.ಎಸ್. ಘಟಕಗಳು ಹಾಗೂ ರೆಡ್ ರಿಬ್ಬನ್ ಕ್ಲಬ್‌ಗಳ ಸಂಯುಕ್ತ ಆಶ್ರಯದಲ್ಲಿ ಮ್ಯಾರಾಥಾನ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.

ನಗರದ ಕೆ.ಎಚ್.ಪಾಟೀಲ್ ಜಿಲ್ಲಾ ಕ್ರಿಡಾಂಗಣದಲ್ಲಿ ಬುಧವಾರ ಮ್ಯಾರಾಥಾನ ಸ್ಪರ್ಧೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಉದ್ಘಾಟಿಸಿದರು.

ನಂತರ ಅವರು ಮಾತನಾಡಿ ಹೆಚ್.ಐ.ವಿ/ಏಡ್ಸ್ ತಡೆಗಟ್ಟಲು ತೀವ್ರತರವಾದ ಐ.ಇ.ಸಿ ಪ್ರಚಾರಾಂದೋಲನ-2025 ರ ಅಂಗವಾಗಿ ರೆಡ್ ರಿಬ್ಬನ್ ಕಾಲೇಜು ವಿದ್ಯಾರ್ಥಿಗಳಿಗಾಗಿ 5 ಕಿ.ಮೀ. ಮ್ಯಾರಾಥಾನ ಸ್ಪರ್ಧೆಯನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಹೆಚ್.ಐ.ವಿ. ಪ್ರಮಾಣ ಇಳಿಮುಖವಾಗಿದ್ದು, ವಿದ್ಯಾರ್ಥಿಗಳು ಹೆಚ್.ಐ.ವಿ.ಏಡ್ಸ್ ಬಗ್ಗೆ ಮಾಹಿತಿ ತಿಳಿದುಕೊಂಡು ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕೆಂದು ಹೇಳಿದರು. ತೀವ್ರತರವಾದ ಐ.ಇ.ಸಿ. ಪ್ರಚಾರಾಂದೋಲನದ ಘೋಷ ವಾಕ್ಯದಂತೆ "ಸುಸ್ಥಿರ ಡಿಜಿಟಲ್ ಅಭಿವೃದ್ಧಿಗಾಗಿ ಸ್ಥಳೀಯ ಯುವಜನತೆಯ ಪಾತ್ರ ಹಾಗೂ ಗುರಿಗಳು" ಘೋಷಣೆಯಂತೆ ಯುವಕರು ಸಂಯಮದಿಂದ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಸದೃಢ



ಆರೋಗ್ಯವನ್ನು ಹೊಂದಿ ಸಮೃದ್ಧ ಭಾರತವನ್ನು ನಿರ್ಮಾಣ ಮಾಡಲು ಕೈ ಜೋಡಿಸಬೇಕೆಂದು ಕರೆ ನೀಡಿದರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಡಾ. ಆರ್.ಎನ್. ಗೋಡಬೇಲೆ ಮಾತನಾಡಿ ವಿದ್ಯಾರ್ಥಿಗಳು ಯವ್ವನದಲ್ಲಿ ತಮ್ಮ ಜೀವನವನ್ನು ಜೋಪಾನ ಮಾಡಿಕೊಂಡು ಆರೋಗ್ಯಕರ ನಡುವಳಿಕೆಗಳನ್ನು ರೂಪಿಸಿಕೊಳ್ಳಲು ಕರೆ ನೀಡಿದರು.

ಡಾ. ಅರುಂಧತಿ ಕುಲಕರ್ಣಿರವರು ಮಾತನಾಡಿ ಹೆಚ್.ಐ.ವಿ. ಸೋಂಕಿನ ಪ್ರಮಾಣ ಇಳಿಮುಖವಾಗಿದ್ದು, ಜಿಲ್ಲೆಯ ಯುವ ಸಮುದಾಯ ಜಾಗೃತಿಯನ್ನು ಮೂಡಿಸಿ ಜಿಲ್ಲೆಯಲ್ಲಿ ಸೋಂಕಿನ ಪ್ರಮಾಣವನ್ನು ಸೊನ್ನೆಗೆ ತರಲು ಶ್ರಮಿಸಬೇಕೆಂದು ತಿಳಿಸಿದರು

ಮ್ಯಾರಾಥಾನ ನಡೆಸುವ ಉದ್ದೇಶ ಹೆಚ್.ಏಡ್ಸ್. ಬಗ್ಗೆ ಅರಿವು, ಸೇವಾ ಸೌಲಭ್ಯಗಳ ಮಾಹಿತಿ, ಕಳಂಕ ಮತ್ತು ತಾರತಮ್ಯವನ್ನು ತಡೆಗಟ್ಟುವುದು, ಹೆಚ್.ಐ.ವಿ.ಏಡ್ಸ ತಡೆ ಕಾಯ್ದೆ-2017, ನ್ಯಾಕೋ ಏಡ್ಸ್‌ಪ್, ಉಚಿತ ಸಹಾಯವಾಣಿ 1097, ಎಸ್,ಟಿ.ಐ. ಖಾಯಿಲೆಗಳು ಇತಾದಿ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವುದು ಈ ಸ್ಪರ್ಧೆಯ ಉದ್ದೇಶ ಎಂದು ಹೇಳಿದರು.

ಆರೋಗ್ಯವಂತ ಯುವ ಸಮುದಾಯ ದೇಶದ ಸಂಪನ್ಮೂಲವಾಗಿ ದೇಶದ ಅಭಿವೃದ್ಧಿಗೆ ಹಾಗೂ ಸಮಾಜದ ಒಳಿತಿಗಾಗಿ ಸೇವಾ ಮನೋಭಾವ ಬೆಳೆಸಿಕೊಳ್ಳಲು ತಿಳಿಹೇಳಿದರು.

ಮ್ಯಾರಾಥಾನ ಸ್ಪರ್ಧೆಯಲ್ಲಿ ಪುರುಷರಲ್ಲಿ ಪ್ರಥಮ ಸ್ಥಾನವನ್ನು ರಮೇಶ ಸಿಂಗಡಾನಕೇರಿ, ದ್ವಿತೀಯ ಸ್ಥಾನವನ್ನು ದೇವರಾಜ ದೊಡಮನಿ, ತೃತೀಯ ಸ್ಥಾನವನ್ನು ಅಶೋಕ ವಡ್ಡರ ಪಡೆದುಕೊಂದಿದ್ದು ಪ್ರಶಸ್ತಿಗೆ ಭಾಜನರಾದರು. ವಿದ್ಯಾರ್ಥಿನಿಯರ ವಿಭಾಗದಲ್ಲಿ ಪ್ರಥ-'ಮ ಸ್ಥಾನವನ್ನು ದ್ರಾಕ್ಷಾಯಿಣಿ ಕರ್ಣಿ, ದ್ವಿತೀಯ ಸ್ಥಾನವನ್ನು ಪ್ರೀತಿ ಬ. ಮುಗಳಿ, ತೃತೀಯ ಸ್ಥಾನವನ್ನು ಅಕ್ಷತಾ ಕಲಗುಡಿ ಪಡೆದುಕೊಂಡಿದ್ದು ಪ್ರಶಸ್ತಿಗೆ ಭಾಜನರಾದರು.

ಮ್ಯಾರಾಥಾನದಲ್ಲಿ ಸುಮಾರು 250 ವಿದ್ಯಾರ್ಥಿ/ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಮ್ಯಾರಾಥಾನ ಜಾಗೃತಿ ಯಶಸ್ವಿಯಾಯಿತು.

ಕ್ರೀಡಾ ಇಲಾಖೆ ತರಬೇತಿದಾರರಾದ ಮಂಜುನಾಥ ಬಾಗಡೆ, ಶ್ರೀಮತಿ ವಿದ್ಯಾ ಕುಲಕರ್ಣಿ, ಗದಗ ತಾಲೂಕಿನ ಆರೋಗ್ಯ ನೀರಿಕ್ಷಣಾಧಿಕಾರಿಗಳ ಸಂಘದ ಪದಾಧಿಕಾರಿಗಳು, ಜಿಲ್ಲೆಯ ರೆಡ್ ರಿಬ್ಬನ್ ಹಾಗೂ ಎನ್.ಎಸ್.ಎಸ್. ಅಧಿಕಾರಿಗಳು, ಆರೋಗ್ಯ ಇಲಾಖೆಯ ರೂಪಸೇನ್ ಚೌವ್ಹಾಣ, ಸಿದ್ದಪ್ಪ ಲಿಂಗದಾಳ, ಬಸವರಾಜ ಹಿರೇಹಾಳ, ಗುರುರಾಜ ಕೋಟ್ಯಾಳ, ಗಣೇಶ ಬಾಗಡೆ, ಪ್ರವೀಣ ರಾಮಗಿರಿ, ಜಿಲ್ಲೆಯ ಎಲ್ಲ ಐಸಿಟಿಸಿ, ಎ.ಆರ್.ಟಿ. ಡ್ಯಾಪ್ಕೂ ಸಿಬ್ಬಂದಿ, ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗ ಹಾಗೂ ಶಿಕ್ಷಣ ಇಲಾಖೆಯ ಸಿಬ್ಬಂದಿ, ರಕ್ಷಣೆ ಸಂಸ್ಥೆಯ ಹಜರತ್‌ಬಿ ಮತ್ತು ಸಿಬ್ಬಂದಿ, ಚೈತನ್ಯ ಸಂಸ್ಥೆಯ ಸುನೀಲ್ ಮತ್ತು ಸಿಬ್ಬಂದಿ, ನವಚೇತನ ಸಂಸ್ಥೆಯ ಭಾರತಿ ಹಾಗೂ ಎಲ್ಲ ಸಿಬ್ಬಂದಿ ಹಾಜರಿದ್ದರು.

ಜೈ ಭೀಮ ಗೀಗೀ ಜಾನಪದ ಕಲಾ ತಂಡ ನೀಲಗುಂದ ಇವರು ಜನಪದ ಗೀತೆಗಳ ಮೂಲಕ ಜಾಗೃತಿ ಮೂಡಿಸಿದರು. ಬಸವರಾಜ ಲಾಳಗಟ್ಟಿ ಸ್ವಾಗತಿಸಿದರು. ರಾಜೇಂದ್ರ ಗಡಾದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### ಗದಗ- ಬೆಟಗೇರಿ ರೋಟರಿ ಕ್ಲಬ್‌ನ ಸಾಪ್ತಾಹಿಕ ಸಭೆ : ಶಿಕ್ಷಕರ ದಿನಾಚರಣೆ

# ಜೀವನದ ಅರ್ಥವನ್ನು, ಅರ್ಥೈಸುವವನೇ ಶಿಕ್ಷಕ: ಗಚ್ಚಿನಮಠ

❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 10 : ಸಾಮಾನ್ಯ ಮನುಷ್ಯನ ಬದುಕಿನ ಮೌಲ್ಯಗಳು ಜೀವನದ ಅರ್ಥ, ನಿರ್ದಿಷ್ಟ ಗುರಿ ಹಾಗೂ ಗುರಿಯನ್ನು ತಲುಪಲು ಇರುವ ಸಾಧನ. ಇವುಗಳನ್ನು ಸರಿಯಾದ ಕ್ರಮದಲ್ಲಿ ತಿದ್ದಿ-ತೀಡಿ ಬದುಕನ್ನು ಹಸನುಗೊಳಿಸಲು ಶ್ರಮಿಸುವ ಪರಿಶ್ರಮಿಯೇ ಶಿಕ್ಷಕ ಗುರು ಎಂದು ಗದಗ-ಬೆಟಗೇರಿ ರೋಟರಿ ಕ್ಲಬ್‌ನ ಅಧ್ಯಕ್ಷ ಡಾ.ಆರ್.ವಿ.ಗಚ್ಚಿನಮಠ ಹೇಳಿದರು.

ಅವರು ಮಂಗಳವಾರ ಗದುಗಿನ ರೋಟರಿ ಐ ಕೇರ್ ಸೆಂಟರ್‌ನಲ್ಲಿ ರೋಟರಿ ಕ್ಲಬ್‌ನ ಸಾಪ್ತಾಹಿಕ ಸಭೆಯಲ್ಲಿ ಜರುಗಿದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಾಲೆಗಳು ಸಮುದಾಯದ ಕೇಂದ್ರ ಬಿಂದುಗಳು. ಮಕ್ಕಳನ್ನು ಭಾವಿ ಭವಿಷ್ಯಕ್ಕೆ ತಯಾರು ಮಾಡುವ ಜವಾಬ್ದಾರಿಯುತ ತಾಣಗಳು. ಮಕ್ಕಳ ಜೀವನವನ್ನು ಅರ್ಥಪೂರ್ಣವಾಗಿ ರೂಪಿಸುವ ಶಿಕ್ಷಕ ಬಳಗವು ಸದಾ ಪೂಜ್ಯನೀಯ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಜಿಲ್ಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರಡಿ ಮಾತನಾಡಿ ಶಿಕ್ಷಕ ಸಮುದಾಯವು ತ್ಯಾಗಮಯ ಜೀವಿಗಳಾಗಿದ್ದು, ಅಕ್ಷರ ಜ್ಞಾನದ ಮೂಲಕ ಅವರಲ್ಲಿ ಕಲಿಕೆಯೊಂದಿಗೆ ನೈತಿಕ-ಶೈಕ್ಷಣಿಕ ಅಭಿವೃದ್ಧಿಯ ಚಿಂತನೆಗಳನ್ನು ಮೂಡಿಸಿ ಅವರನ್ನು ಭವಿಷ್ಯದ ಉಜ್ವಲ ಹಾಗೂ ಪ್ರತಿಭಾನ್ವಿತ ನಾಗರಿಕರನ್ನಾಗಿ ರೂಪಿಸುತ್ತಾರೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬಿ.ಎಸ್.ಉಪ್ಪಿನ ಮಾತನಾಡಿ ಶಿಕ್ಷಕರು ಪ್ರತಿಯೊಂದು ಮಗುವಿನ ಮನಗೆಲ್ಲುವ




ಧೀಮಂತ ವ್ಯಕ್ತಿಗಳು. ಮುಗ್ಧ ಮಗುವಿನ ಮುಗುಳು ನಗೆಯನ್ನು ಇನ್ನಷ್ಟು ಅರಳಿಸಿ ಅವರ ಬದುಕನ್ನು ಹಸನುಗೊಳಿಸುವ ಕಾರ್ಯ ಶಿಕ್ಷಕರದ್ದಾಗಿದೆ ಎಂದರು.

ಶಿಕ್ಷಕರ ದಿನಾಚರಣೆ ಕುರಿತು ಮಾತನಾಡಿದ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಇಂದಿನ ದಿನಮಾನಗಳಲ್ಲಿ ಮಕ್ಕಳ ಮಾತನ್ನು ಆಲಿಸಿ ಅವರ ಅಭಿಪ್ರಾಯಗಳಿಗೆ ಮನ್ನಣೆ ನೀಡಿ ಶಾಲೆಯ ಒಳಗೆ ಮತ್ತು ಹೊರಗೆ ಮಕ್ಕಳು ತಮ್ಮ ಜೀವನದ ಮೇಲೆ ಪರಿಣಾಮ ಬೀರುವ ವಿಷಯಗಳು ಹಾಗೂ ಸ್ವಂತ ಯೋಗಕ್ಷೇಮಕ್ಕೆ ಸಂಬಂಧಿಸಿದಂತೆ ಸ್ವಯಂ ನಿರ್ಧಾರ ತಗೆದುಕೊಳ್ಳಲು ಮಕ್ಕಳನ್ನು ಪ್ರೇರೆಪಿಸುವ ಕಾರ್ಯ ನಿರಂತರ ನಡೆಯಬೇಕಿದೆ ಎಂದರು.

ಆತಿಥ್ಯವನ್ನು ಶ್ರೀಧರ ಸುಲ್ತಾನಪೂರ ವಹಿಸಿಕೊಂಡಿದ್ದರು. ಪ್ರಾರಂಭದಲ್ಲಿ ಡಾ. ಕಮಲಾಕ್ಷಿ ಅಂಗಡಿ ಪ್ರಾರ್ಥಿಸಿದರು. ಅಧ್ಯಕ್ಷ ಆರ್.ವಿ.ಗಚ್ಚಿನಮಠ ಸ್ವಾಗತಿಸಿದರು. ಬಾಲಕೃಷ್ಣ ಕಾಮತ ಪರಿಚಯಿಸಿದರು. ಕಾರ್ಯದರ್ಶಿ ಸುರೇಶ ಕುಂಬಾರ ನಿರೂಪಿಸಿದರು. ಕೊನೆಯಲ್ಲಿ ನರೇಶ ಜೈನ್ ವಂದಿಸಿದರು.

ಕಾರ್ಯಕ್ರಮದಲ್ಲಿ ಡಾ.ಶೇಖರ ಸಜ್ಜನರ, ಡಾ.ರಾಜಶೇಖರ ಬಳ್ಳಾರಿ, ಡಾ.ಆರ್.ಬಿ.ಉಪ್ಪಿನ, ಶಿವಾಚಾರ್ಯ ಹೊಸಳ್ಳಿಮಠ, ಚೆನ್ನವೀರಪ್ಪ ಹುಣಸಿಕಟ್ಟಿ, ವಿಶ್ವನಾಥ ಯಳಮಲಿ, ಡಾ.ವಿನಯ ಟಿಕಾರೆ, ಮಹಾಂತೇಶ ಬಾತಾಖಾನಿ, ನಾಗೇಶ ಹಂಜಗಿ, ಮಾಧವ ಕುಲಕರ್ಣಿ, ಶ್ರೀಧರಗೌಡ ಧರ್ಮಾಯತ, ಡಾ.ಧನೇಶ ದೇಸಾಯಿ, ಡಾ.ಪ್ರದೀಪ ಉಗಲಾಟ, ಹೆಚ್.ಎಸ್.ಪಾಟೀಲ, ಕಾರ್ತಿಕ ಮುತ್ತಿನಪೆಂಡಿಮಠ, ಪ್ರೀತಿ ಶಿವಪ್ಪಯ್ಯನಮಠ, ರುದ್ರೇಶ ಬಳಿಗಾರ ಮುಂತಾದವರಿದ್ದರು.

# 14 ರಂದು ರಕ್ತದಾನ ಶಿಬಿರ ಹಾಗೂ ಸಹಕಾರಿ ಸಂಘಗಳ ವಾರ್ಷಿಕ ಸಭೆ

❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 10 : ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ ವಿಶ್ವಕರ್ಮ ಮಹೋತ್ಸವದ ಅಂಗವಾಗಿ ರಕ್ತದಾನ ಶಿಬಿರವನ್ನು ಸೆ. 14 ರಂದು ಬೆಳಗ್ಗೆ 9-30 ಗಂಟೆಗೆ ಹಾಗೂ ವಿಶ್ವಕರ್ಮ ನೌಕರರ ಪತ್ತಿನ ಸಹಕಾರಿ ಸಂಘದ ಹಾಗೂ ವಿಶ್ವಕರ್ಮ ಮಹಿಳಾ ಪತ್ತಿನ ಸಹಕಾರಿ ಸಂಘ ಇವುಗಳ 7ನೇ ವರ್ಷದ ವಾರ್ಷಿಕ ಸರ್ವ ಸಾಧಾರಣ ಸಭೆಯನ್ನು ದಿ. 14 ರ ಬೆಳಗ್ಗೆ 11 ಗಂಟೆಗೆ ನಗರದ ವಿಜಯನಗರ ಬಡಾವಣೆ, ಗಂಗಿಮಡಿ ಕ್ರಾಸ್ ಹತ್ತಿರದ ವಿಶ್ವಕರ್ಮ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ರಕ್ತದಾನ ಶಿಬಿರವನ್ನು ಬೆಳಗ್ಗೆ 9-30ಕ್ಕೆ ನಗರಸಭೆ ಸದಸ್ಯರಾದ ಮಹಬೂಬಸಾಬ್ ಡಿ. ನದಾಫ್ ಅವರು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಖ್ಯಾತ ವೈದ್ಯರಾದ ಡಾ. ಆರ್. ಡಿ. ಪವಾಡಶೆಟ್ಟರ ಹಾಗೂ ಕೆ. ಎಚ್. ಪಾಟೀಲ ಮೆಡಿಕಲ್ ಕಾಲೇಜಿ ವೈದ್ಯರಾದ ಡಾ. ಶೀಧರ ವ್ಹಿ. ಬಡಿಗೇರ ಅಗಮಿಸುವರು. ಅಧ್ಯಕ್ಷತೆಯನ್ನು ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು ಹಾಗೂ ನಿವೃತ್ತ ಪ್ರಾಚಾರ್ಯರಾದ ರಾಜಗೋಪಾಲ ಡಿ. ಕಡ್ಲಿಕೊಪ್ಪ ವಹಿಸುವರು.

ನಂತರ ಬೆಳಗ್ಗೆ 11 ಗಂಟೆಗೆ ಜರುಗುವ ಸಹಕಾರಿ ಪತ್ತಿನ ಸಂಘಗಳ ವಾರ್ಷಿಕ ಸರ್ವ ಸಾಧಾರಣ ಸಭೆಯ ಸಾನಿಧ್ಯವನ್ನು ಶಿರೋಳ ಜಗದ್ಗುರು ಶ್ರೀ ಯಚ್ಚರಸ್ವಾಮಿ ಮಠದ ಶ್ರೀ ಅಭಿನವ ಯಚ್ಚರ ಮಹಾಸ್ವಾಮೀಜಿ ವಹಿಸುವರು. ಸಹಕಾರ ಇಲಾಖೆಯ ನಿವೃತ್ತ ಸಹಾಯಕ ನಿಭಂದಕರಾದ ಬಿ. ಎಂ. ಬಿಳಿಯಲಿ ಉದ್ಘಾಟಿಸುವರು. ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಗೌರವ ಅಧ್ಯಕ್ಷರಾದ ಎ. ಎನ್. ಬಡಿಗೇರ ಅಧ್ಯಕ್ಷತೆವಹಿಸುವರು. ವಿ.ನೌ.ಪ.ಸ.ಸಂಘದ ಅಧ್ಯಕ್ಷರಾದ ರಾಜಗೋಪಾಲ ಕಡ್ಲಿಕೊಪ್ಪ, ಉಪಾಧ್ಯಕ್ಷರಾದ ರವೀಂದ್ರ ಎಂ. ಕಮ್ಮಾರ, ಕಾರ್ಯದರ್ಶಿ ಶ್ರೀಕಾಂತ ಕದಡಿ, ವಿ.ಮ.ಪ.ಸ. ಸಂಘದ ಅಧ್ಯಕ್ಷರಾದ ಶ್ರೀಮತಿ ರಿಂದಮ್ಮ ತೋಟಗಂಟಿ, ಉಪಾಧ್ಯಕ್ಷರಾದ ಶ್ರೀಮತಿ ಮಷ್ಪ ಎ. ವಿಶ್ವಜ್ಞ, ಕಾರ್ಯದರ್ಶಿ ಶ್ರೀಮತಿ ವಾಣಿಶ್ರೀ ಕಡ್ಲಿಕಪ್ಪ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಬಗರ್‌ಹುಕುಂ ರೈತರ ಅಹೋರಾತ್ರಿ ಧರಣಿಗೆ ಸಚಿವ ಎಚ್.ಕೆ. ಪಾಟೀಲ ಸ್ಪಂದನೆ

❑ ಸ್ನೇಹಜೀವಿ ನ್ಯೂಸ್

ಗದಗ, ಸೆ. 10 : ಸತತ 23 ದಿನಗಳಿಂದ ನಡೆದ ರೈತರ ಅಹೋರಾತ್ರಿ ಧರಣಿ ಸ್ಥಳಕ್ಕೆ ಬುಧವಾರ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ ಬೇಟಿ ನೀಡಿ ರೈತರ ವಿವಿಧ ಬೇಡಿಕೆಗಳಿಗೆ ಸ್ಪಂದಿಸಿ, ನೈಜ್ಯ ಸಾಗುವಳಿದಾರರಿಗೆ ಹಕ್ಕುಪತ್ರ ಹಾಗೂ ಸಮಸ್ಯೆಗಳಿಗೆ ಪರಿಹಾರ ದೊರಕಿಸಿಕೊಡುವುದಾಗಿ ಭರವಸೆ ನೀಡಿದರು.

ಉತ್ತರ ಕರ್ನಾಟಕ ಮಹಾಸಭಾದಿಂದ ವಿವಿಧ ಬೇಡಿಕೆಗಳ ಇಡೇರಿಕೆಗೆ ಆಗ್ರಹಿಸಿ ಆಗಸ್ಟ 19, 2025 ರಂದು ಶಿರಹಟ್ಟಿ ಪಟ್ಟಣದ ಫಕೀರೇಶ್ವರ ಮಠದಿಂದ ಆರಂಭವಾದ ಬೃಹತ್ ಪ್ರತಿಭಟನಾ ರ್ಯಾಲಿಯೊಂದಿಗೆ ಪ್ರಾರಂಭವಾದ 5 ಕಿ.ಮೀ ಪಾದಯಾತ್ರೆಯ ಬಳಿಕ ಜಿಲ್ಲಾಡಳಿತ ಭವನದ ಎದುರು 23 ದಿನಗಳ ಕಾಲ ಅಹೋರಾತ್ರಿ ಧರಣಿ ನಡೆಯುತ್ತಿದ್ದು, ಬುಧವಾರ ಸಚಿವ ಎಚ್.ಕೆ ಪಾಟೀಲರ ಭರವಸೆಗೆ ನಾಂದಿ ಹಾಡಿದರು.

ರೈತರ ಪರವಾಗಿ ಮಹಾಸಭೆಯ ಆಗ್ರಹ :

ಉತ್ತರ ಕರ್ನಾಟಕ ಮಹಾಸಭಾದ ಅಧ್ಯಕ್ಷ ರವಿಕಾಂತ ಅಂಗಡಿ ಮಾತನಾಡಿ, "ತಲೆತಲಾಂತರಗಳಿಂದ ರೈತರು ಅರಣ್ಯ ಜಮೀನುಗಳನ್ನು ಉಪಜೀವನಕ್ಕಾಗಿ ಸಾಗುವಳಿ ಮಾಡಿಕೊಂಡು ಬಗರ್‌ಹುಕುಂ ಕೃಷಿ ಮಾಡುತ್ತಿದ್ದಾರೆ.



ಆದರೆ ಸರ್ಕಾರ ಹಕ್ಕುಪತ್ರ ನೀಡದೆ ಕಿರುಕುಳ ನೀಡುತ್ತಿದೆ. ನಾಗಾವಿ ಗ್ರಾಮದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯಕ್ಕಾಗಿ ಸರ್ವೆ ನಂ.143/2ಬಿ/ಬಿ/1ಬಿ/2ರ 124 ಎಕರೆ ಮತ್ತು ಸರ್ವೆ ನಂ.179/ಬಿ ರ 128 ಎಕರೆ 35 ಗುಂಟೆ ಜಮೀನುಗಳನ್ನು ನಾಲ್ಕು ತಲೆಮಾರುಗಳಿಂದ ನೂರಾರು ಕುಟುಂಬಗಳು ಬಳಸಿಕೊಂಡು ಬಂದಿದ್ದರೂ ಯಾವುದೇ ಪರಿಹಾರ ನೀಡದೆ ಒಕ್ಕಲಿಬ್ಬಿಸಿರುವುದು ಖಂಡನೀಯ," ಎಂದು ಹೇಳಿದ್ದಾರೆ.

ಅವರು ಮುಂದುವರೆದು, "ಈ ಎಲ್ಲ ಸಮಸ್ಯೆಗಳಿಗೆ ಸಚಿವರು ಹಿಂದೆಯೇ ಭರವಸೆ ನೀಡಿದಂತೆ ಈಗ ನ್ಯಾಯ ಒದಗಿಸಿಕೊಡಬೇಕು," ಎಂದು ಆಗ್ರಹಿಸಿದರು.

ಸಚಿವರ ಭರವಸೆ :

ರೈತರ ಬೇಡಿಕೆಗಳಿಗೆ ಸ್ಪಂದಿಸಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿ "ಈ ಹೋರಾಟ ಮೊಟ್ಟಮೊದಲ ಬಾರಿಯದ್ದಲ್ಲ. ಹಿಂದೆಯೂ ನೀವು ಹೋರಾಟ ಮಾಡಿದಾಗ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದೆ. ಆದರೆ ಜಿಲ್ಲೆಯಲ್ಲಿ ಮೂರನೇ ಬಾರಿ ಜಿಲ್ಲಾಧಿಕಾರಿಗಳು ಬದಲಾಗಿದ್ದಾರೆ. ಎಡಿಸಿ ನೇತೃತ್ವದಲ್ಲಿ ಸಮಿತಿಯನ್ನು ರಚಿಸಿ ವರದಿ ನೀಡಲು ಸೂಚಿಸಲಾಗಿತ್ತು, ಆದರೆ ವರದಿ ಇನ್ನೂ ಸಿಕ್ಕಿಲ್ಲ.

ಈಗ ಜಿಲ್ಲಾಧಿಕಾರಿಗಳು, ಎಡಿಸಿ, ಎಸಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳ ಸಮಿತಿಯು ಪ್ರತಿಯೊಬ್ಬ ರೈತರ ಮನೆ ಬಾಗಿಲಿಗೆ ತೆರಳಿ ಸಮಸ್ಯೆಗಳನ್ನು ಪರಿಶೀಲಿಸಿ ಪರಿಹಾರ ಹಾಗೂ ಹಕ್ಕುಪತ್ರ ಕುರಿತು ಅಕ್ಟೋಬರ್ 2ರೊಳಗೆ ವರದಿ ಸಲ್ಲಿಸಬೇಕು. ಬಳಿಕ ರೈತರೊಂದಿಗೆ ಸಭೆ ನಡೆಸಿ ನ್ಯಾಯ ಒದಗಿಸಬೇಕು" ಎಂದು ಸೂಚಿಸಿದರು.

> "ನಾನು ಅಧಿಕಾರದಲ್ಲಿ ಇರಲಿ ಬಿಡಲಿ, ನೈಜ್ಯ ಸಾಗುವಳಿದಾರರಿಗೆ ಹಕ್ಕುಪತ್ರ ದೊರಕುವವರೆಗೆ ಹೋರಾಟ ನಡೆಸುತ್ತೇನೆ,"
> – ಎಚ್.ಕೆ.ಪಾಟೀಲ
> ಜಿಲ್ಲಾ ಉಸ್ತುವಾರಿ ಸಚಿವರು

ವಿಂಡ್ ಪವರ್ ಫ್ಯಾನ್ ಕಂಪನಿಗಳು ಜಿಲ್ಲೆಯಲ್ಲಿ ಜಮೀನು ಖರೀದಿಸುತ್ತಿದ್ದು, ಏಜೆಂಟರು ರೈತರಿಗೆ ಕಡಿಮೆ ಹಣ ನೀಡಿ ಮೋಸ ಮಾಡುವ ಘಟನೆಗಳು ನಡೆದಿವೆ. ಕೆಲವರಿಗೆ ಹೆಚ್ಚಾಗಿ ಹಣ ನೀಡುವ ಮೂಲಕ ದಾರಿ ತಪ್ಪಿಸುತ್ತಿದ್ದಾರೆ. "ಆದ್ದರಿಂದ ರೈತರು ಜಾಗೃತರಾಗಿರಿ. ನಿಮ್ಮ ಜಮೀನಿನ ನಿಜವಾದ ಮೌಲ್ಯ ತಿಳಿಯಲು ಜಿಲ್ಲಾಧಿಕಾರಿಗಳ ಬಳಿ ಹೋಗಿ, ಮೋಸಕ್ಕೆ ಒಳಗಾಗಬೇಡಿ" ಎಂದು ಸಚಿವರು ಎಚ್ಚರಿಕೆ ನೀಡಿದರು.

ಈ ವೇಳೆ ಡಿಸಿ, ಎಡಿಸಿ, ಎಸಿ, ಎಸ್‌ಪಿ, ಸಿದ್ದು ಪಾಟೀಲ, ಅಪ್ಪಣ್ಣ ಇನಾಮತಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬರ್ಚಿ, ಬಿ.ಎಸ್. ಚಿಂಚಲಿ, ಪ್ರೋ. ಎನ್.ಟಿ. ಪೂಜಾರ, ಸುರೇಶ ಮಹಾರಾಜ, ಫಿರೋಜ್ ಸದಾಫ್, ಚಂಬಣ್ಣ ಚನ್ನಪಟ್ಟಣ, ನಾಮದೇವ ಸೇರಿದಂತೆ ಅನೇಕ ರೈತರು, ಮಹಿಳೆಯರು ಹಾಗೂ ಹೋರಾಟಗಾರರು ಉಪಸ್ಥಿತರಿದ್ದರು.

# 1ನೇ ಪುಟದಿಂದ

## ಶಾಸಕಾಂಗ ಅಂಗೀಕರಿಸಿ ಮಸೂದೆ ತಡೆಗೆ

ಚುನಾಯಿತ ರಾಜ್ಯ ಶಾಸಕಾಂಗದ ಅಸ್ತಿತ್ವಕ್ಕೆ ವಿರುದ್ಧವಾಗಿದೆ," ಎಂದು ಕರ್ನಾಟಕ ಪರ ಹಾಜರಾದ ಗೋಪಾಲ್ ಸುಬ್ರಮಣ್ಯಂ ಹೇಳಿದರು.

ಆದಾಗ್ಯೂ, ಭ್ರಷ್ಟಾಚಾರ ತಡೆ ಕಾಯ್ದೆಯಡಿ ಮಂತ್ರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲು ಅನುಮತಿ ನೀಡಲು ಸಂಬಂಧಿಸಿದ ವಿಷಯಗಳಲ್ಲಿ ಮಂತ್ರಿಮಂಡಲದ ಸಹಾಯ ಮತ್ತು ಸಲಹೆಯಿಲ್ಲದೆ ರಾಜ್ಯಪಾಲರು ಕಾರ್ಯನಿರ್ವಹಿಸಬಹುದು ಎಂದು ಅವರು ಒಪ್ಪಿಕೊಂಡರು.

ವಿಶ್ವವಿದ್ಯಾಲಯಗಳ ಕುಲಪತಿಯಾಗಿ ಕಾರ್ಯನಿರ್ವಹಿಸುವಾಗ ಮತ್ತು ಧಾರ್ಮಿಕ ಮಂಡಳಿಗಳ ಮುಖ್ಯಸ್ಥರಾಗಿ ಒಪ್ಪಿಗೆಯನ್ನು ತಡೆಹಿಡಿಯುವ ಅಧಿಕಾರವು ಅದನ್ನು ಮರುಪರಿಶೀಲನೆಗಾಗಿ ಶಾಸಕಾಂಗಕ್ಕೆ ಹಿಂದಿರುಗಿಸಲು ಅನುಕರಣೀಯವಾಗಿದೆ ಮತ್ತು ಶಾಸಕಾಂಗವು ಮಸೂದೆಯನ್ನು ಮತ್ತೆ ಅಂಗೀಕರಿಸಿದರೆ, ತಿದ್ದುಪಡಿಗಳೊಂದಿಗೆ ಅಥವಾ ಇಲ್ಲದೆ, ರಾಜ್ಯಪಾಲರಿಗೆ ಒಪ್ಪಿಗೆ ನೀಡುವುದನ್ನು ಬಿಟ್ಟು ಬೇರೆ ಆಯ್ಕೆಯಿಲ್ಲ ಎಂದು ಅವರು ಪ್ರತಿಪಾದಿಸಿದ್ದಾರೆ.

ಪ್ರಸ್ತುತ ರಾಜಕೀಯ ಪರಿಸ್ಥಿತಿಯಲ್ಲಿ ಮಸೂದೆಗಳ ಬಗ್ಗೆ ನಿರ್ಧಾರ ತೆಗೆದುಕೊಳ್ಳಲು ರಾಜ್ಯಪಾಲರು ಮತ್ತು ರಾಷ್ಟ್ರಪತಿ ಅವರಿಗೆ ಕಾಲಮಿತಿ ಅಗತ್ಯವಾಗಿದೆ ಎಂದು ಸುಬ್ರಮಣ್ಯಂ ಹೇಳಿದರು. ಇದಲ್ಲದೆ, ಸುಪ್ರೀಂ ಕೋರ್ಟ್ ತನ್ನ ಏಪ್ರಿಲ್ 8 ರ ತೀರ್ಪಿನಲ್ಲಿ ತಮಿಳುನಾಡು ಪ್ರಕರಣದಲ್ಲಿ ಕಾಲಮಿತಿಯನ್ನು ಒದಗಿಸುವ ಮೂಲಕ ನಿರ್ದಿಷ್ಟ ಸಮಯದೊಳಗೆ ಮಸೂದೆಗಳ ಬಗ್ಗೆ ನಿರ್ಧಾರ ತೆಗೆದುಕೊಳ್ಳದಿದ್ದರೆ ಮಾತ್ರ ಬಾಧಿತ ರಾಜ್ಯಗಳಿಗೆ ನ್ಯಾಯಾಲಯವನ್ನು ಸಂಪರ್ಕಿಸಲು ಅನುಕೂಲ ಮಾಡಿಕೊಟ್ಟಿದೆ ಎಂದು ವಾದಿಸಿದ್ದಾರೆ.

## ಮೋದಿ ಜೊತೆ ಮಾತುಕತೆಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಿದ್ಧ

ಫಲಪ್ರದ ಮಾತುಕತೆಯ ವಿಶ್ವಾಸದಲ್ಲಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅಮೆಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಯ ಭಾರತದ ಪ್ರಧಾನಿ ನರೇಂದ್ರ ಮೋದಿ ತಮ್ಮ ಆತ್ಮೀಯ ಸ್ನೇಹಿತ ಅವರೊಂದಿಗೆ ಭಾರತ– ಅಮೇರಿಕಾ ನಡುವಿನ ವ್ಯಾಪಾರ ಒಪ್ಪಂದವನ್ನು ಮುಂದಿನ ಹಂತಕ್ಕೆ ಕೊಂಡೊಯ್ಯಲು ಮತ್ತು ಸಕಾರಾತ್ಮಕ ಫಲಿತಾಂಶ ಬರುವ ನಿರೀಕ್ಷೆ ಇದೆ ಎಂದಿದ್ದಾರೆ.

ಡೊನಾಲ್ಡ್ ಟ್ರಂಪ್ ಅವರ ಪೋಸ್ಟ್ ಗೆ ಪ್ರತಿಕ್ರಿಯಿಸಿದ ಪ್ರಧಾನಿ ನರೇಂದ್ರ ಮೋದಿ, ದ್ವಿಪಕ್ಷೀಯ ವ್ಯಾಪಾರ ಮಾತುಕತೆಗಳು "ಭಾರತ–ಅಮೆರಿಕಾ ಪಾಲುದಾರಿಕೆ ಸುಗಮಗೊಳಿಸುವ ಎಲ್ಲಾ ಪ್ರಯತ್ನ ನಡೆದಿದೆ ಎಂದಿದ್ದಾರೆ

"ಭಾರತ ಮತ್ತು ಅಮೆರಿಕಾ ಆಪ್ತ ಸ್ನೇಹಿತರು ಮತ್ತು ನೈಸರ್ಗಿಕ ಪಾಲುದಾರರು. ವ್ಯಾಪಾರ ಮಾತುಕತೆಗಳು ಭಾರತ–ಅಮೇರಿಕಾ ಪಾಲುದಾರಿಕೆಯ ಅಪರಿಮಿತ ಸಾಮಥ–ರ್ಯದ ಬಗ್ಗೆ ಅವರಿವಿದೆ. ಎರಡೂ ದೇಶಗಳು ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ.

ಭಾರತ– ಅಮೆರಿಕಾ ನಡುವಿನ ವ್ಯಾಪಾರ ಒಪ್ಪಂದದ ಮಾತುಕತೆ ಕುರಿತು ಶೀಘ್ರದಲ್ಲಿ ಚರ್ಚೆ ನಡೆಸಿ ಪರಿಹಾರ ಕಂಡುಕೊಳ್ಳುವ ವಿಶ್ವಾಸವಿದೆ, ಈ ಸಂಬಂಧ ಡೊನಾಲ್ಡ್ ಟ್ರಂಪ್ ಜೊತೆ ಮಾತುಕತೆಗೆ ಸಿದ್ಧ ಎಂದು ತಿಳಿಸಿದ್ದಾರೆ.

ಮುಂದಿನ ವಾರ ಮಾತುಕತೆ ನಿರೀಕ್ಷೆ:

ಅಧಿಕೃತ ಮೂಲಗಳ ಪ್ರಕಾರ, ಮುಖ್ಯ ವ್ಯಾಪಾರ ಸಮಾಲೋಚಕ ರಾಜೇಶ್ ಅಗರ್ವಾಲ್ ನೇತೃತ್ವದ ಭಾರತೀಯ ತಂಡ ಮುಂದಿನ ವಾರ ತಮ್ಮ ಅಮೇರಿಕಾಕ್ಕೆ ಭೇಟಿ ನೀಡಲಿದ್ದು ವ್ಯಾಪಾರ ಮಾತುಕತೆಗಳನ್ನು ಪುನರಾರಂಭಿಸುವ ಸಾದ್ಯತೆ ಇದೆ ಎನ್ನಲಾಗಿದೆ

ದಿನಾಂಕ ಇನ್ನೂ ಅಂತಿಮಗೊಳಿಸಲಾಗಿಲ್ಲ, ವ್ಯಾಪಾರ ಮಾತುಕತೆಯನ್ನು ಮತ್ತೆ ಹಳಿಗೆ ತರಲು ಭಾರತ– ಅಮೇರಿಕಾ ಶ್ರಮಿಸುತ್ತಿವೆ.ಈಗಾಗಲೇ ಚರ್ಚೆ ನಡೆದಿದೆ ಎನ್ನಲಾಗಿದೆ.

ವ್ಯಾಪಾರ ಸಮಸ್ಯೆಗೆ ಪರಿಹಾರ; ಟ್ರಂಪ್

'ಭಾರತ ಮತ್ತು ಅಮೆರಿಕ ರಾಷ್ಟ್ರಗಳ ನಡುವಿನ ವ್ಯಾಪಾರ ಅಡೆತಡೆಗಳನ್ನು ಪರಿಹರಿಸಲು ಮಾತುಕತೆಗಳನ್ನು ಮುಂದುವರಿಸುತ್ತಿವೆ ಎಂದು ಘೋಷಿಸಲು ನನಗೆ ಸಂತೋಷವಾಗಿದೆ ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ

ಮುಂಬರುವ ವಾರಗಳಲ್ಲಿ ಆತ್ಮೀಯ ಸ್ನೇಹಿತ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮಾತನಾಡಲು ಎದುರು ನೋಡುತ್ತಿದ್ದೇನೆ. ಎರಡೂ ಮಹಾನ್ ದೇಶಗಳಿಗೆ ಯಶಸ್ವಿ ತೀರ್ಮಾನಕ್ಕೆ ಬರಲು ಯಾವುದೇ ತೊಂದರೆ ಇರುವುದಿಲ್ಲ ಎಂದು ನನಗೆ ಖಚಿತವಾಗಿದೆ. ಎಂದಿದ್ದಾರೆ.

ದ್ವಿಪಕ್ಷೀಯ ಮಾತುಕತೆ:ಮೋದಿ

ಭಾರತ– ಅಮೇರಿಕಾ ನಡುವೆ ದ್ವಿಪಕ್ಷೀಯ ವ್ಯಾಪಾರ ಮಾತುಕತೆ ನಡೆಯುವುದನ್ನು ಎದುರು ನೋಡುತ್ತಿದ್ದೇನೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ

"ಭಾರತ–ಅಮೇರಿಕಾ ಪಾಲುದಾರಿಕೆ ಸುಗಮಗೊಳಿಸುವ ಎಲ್ಲಾ ಪ್ರಯತ್ನ ನಡೆದಿದೆ "ಭಾರತ ಮತ್ತು ಅಮೇರಿಕಾ ಆಪ್ತ ಸ್ನೇಹಿತರು ಮತ್ತು ನೈಸರ್ಗಿಕ ಪಾಲುದಾರರು. ಎರಡೂ ದೇಶಗಳು ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ

## ರಾಜ್ಯದ ಜನತೆಗೆ ಬಿಗ್ ಶಾಕ್; 3.65 ಲಕ್ಷ ಅನರ್ಹ ಬಿಪಿಎಲ್ ಕಾರ್ಡ್ ರದ್ದು : ಸಿಎಂ ಸಿದ್ದರಾಮಯ್ಯ

ಚೀಟಿಗಳನ್ನು ರದ್ದು ಮಾಡಲಾಗಿದೆ. ಅನ್ನಭಾಗ್ಯ ಯೋಜನೆಯಡಿ ಅಕ್ಕಿಯ ಜೊತೆಗೆ ಪೌಷ್ಟಿಕ ಧಾನ್ಯ,ಅಗತ್ಯ ಆಹಾರ ಸಾಮಾಗ್ರಿಗಳನ್ನು ಒಳಗೊಂಡ ಕಿಟ್ ಒದಗಿಸುವ ಕುರಿತು ಪರಿಶೀಲನೆ ನಡೆಸಲಾಗುವುದು. ಈ ಕುರಿತು ಅಧಿಕಾರಿಗಳು ಪ್ರಸ್ತಾವನೆ ಸಲ್ಲಿಸಲಿ ಎಂದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದವರಿಗೆ ಹೊಸ ನ್ಯಾಯ ಬೆಲೆ ಅಂಗಡಿಗಳನ್ನು ಆದ್ಯತೆ ಮೇಲೆ ನೀಡಲು ಕ್ರಮ ಕೈಗೊಳ್ಳಬೇಕು. ಆಹಾರ ಧಾನ್ಯಗಳನ್ನು ಸರಬರಾಜು ಮಾಡುತ್ತಿರುವ ವಾಹನಗಳಿಗೆ ಜಿಪಿಎಸ್ ಟ್ರಾಕರ್‌ಗಳನ್ನು ಅಳವಡಿಸಬೇಕು. ರಾಜ್ಯದಲ್ಲಿರುವ ಎಲ್ಲಾ ಗೋದಾಮುಗಳಲ್ಲಿ ಸಿಸಿಟಿವಿ ಅಳವಡಿಸಲು ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕನಿಷ್ಠ ಬೆಂಬಲ ಯೋಜನೆಯಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಸ್ವಸಹಾಯ ಸಂಘಗಳ ಸಹಯೋಗದೊಂದಿಗೆ ಆಹಾರಧಾನ್ಯಗಳ ಖರೀದಿ ಪ್ರಕ್ರಿಯೆ ನಡೆಸಬೇಕು. ಇದೇ ಪ್ರಥಮ ಬಾರಿಗೆ 0.29 ಲಕ್ಷ ಮೆಟ್ರಿಕ್ ಟನ್ ಕಿರು ಸಿರಿಧಾನ್ಯಗಳನ್ನು ಖರೀದಿಸಲಾಗುತ್ತಿದೆ.

ಆಹಾರ ಮತ್ತು ನಾಗರಿಕ ಸರಬರಾಜು ನಿಗಮದಲ್ಲಿ ಖಾಲಿಯಿರುವ ಅಗತ್ಯ ಸಿಬ್ಬಂದಿಗಳ ನೇಮಕಾತಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಹೇಳಿದ್ದಾರೆ.

## ಕೊಪ್ಪಳದಲ್ಲಿ ೨,೩೪೫ ಕೋಟಿ ವೆಚ್ಚದ ಉಕ್ಕು ಘಟಕ ಸ್ಥಾಪನೆ

❑ ಸ್ನೇಹಜೀವಿ ನ್ಯೂಸ್

ಕೊಪ್ಪಳ: ಬಜಾಜ್ ಗ್ರೂಪ್ ಜೊತೆಗಿನ ಸಹಭಾಗಿತ್ವದ ಮುಕಂದ ಸುಮಿ ಕಂಪನಿ ಮೂಲಕ ಕೊಪ್ಪಳದಲ್ಲಿನ ಉಕ್ಕು ತಯಾ–ರಿಕಾ ಘಟಕದಲ್ಲಿ 2,345 ಕೋಟಿ ರೂ. ಬಂಡವಾಳ ಹೂಡಿಕೆ ಮಾಡುವುದನ್ನು ಸುಮಿಟೊಮೊ ಖಚಿತಪಡಿಸಿದೆ.

ಈ ಕುರಿತು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು ಮಾಹಿತಿ ನೀಡಿದ್ದು, ಈ ಘಟಕವು 2028ರ ವೇಳೆಗೆ ಕಾರ್ಯಾರಂಭ ಮಾಡಲಿದೆ. ವಾರ್ಷಿಕ 3,50,000 ಟನ್‌ಗಳಷ್ಟು ಕಬ್ಬಿಣ, ಉಕ್ಕು ತಯಾರಿಸುವ ಸಾಮರ್ಥ್ಯ ಹೊಂದಿದೆ. ಶೀಘ್ರದಲ್ಲಿಯೇ ರಾಜ್ಯದಲ್ಲಿ ಬಯೊಮಾಸ್ ಘಟಕವನ್ನು ಸ್ಥಾಪಿಸುವ ಬಗ್ಗೆಯೂ ಸುಮಿಟೊಮೊ ಆಸಕ್ತಿ ವ್ಯಕ್ತಪಡಿಸಿದೆ ಎಂದು ಸಚಿವರು ವಿವರಿಸಿದ್ದಾರೆ.

ಪಾಲುದಾರಿಕೆಯಡಿ ಹುಬ್ಬಳ್ಳಿಯಲ್ಲಿರುವ ಪ್ರತಿಷ್ಠಿತ ಎನ್‌ಜಿಇಎಫ್ ಕಾರ್ಖಾನೆ ಪುನ:ಶ್ಚೇತನದ ಸಾಧ್ಯತೆಗಳ ಕುರಿತು ಜಪಾನಿನ ಜೆಎಫ್‌ಇ ಷೋಜಿ ಕಂಪನಿ ಜೊತೆ ಸಚಿವರು ಮಾತುಕತೆ ನಡೆಸಿದ್ದು, ಕಾರ್ಖಾನೆಗೆ ಆಹ್ವಾನ ನೀಡಿದ್ದಾರೆ.

ಬಂಡವಾಳ ಹೂಡಿಕೆ ಆಕರ್ಷಿಸಲು ಜಪಾನ್‌ಗೆ ಭೇಟಿ ನೀಡಿರುವ ರಾಜ್ಯ ಉನ್ನತ



ಮಟ್ಟದ ನಿಯೋಗದ ನೇತೃತ್ವ ವಹಿಸಿರುವ ಸಚಿವರು,

ಕಂಪನಿಯ ಉನ್ನತಾಧಿಕಾರಿಗಳ ಜೊತೆ ಬುಧವಾರ (ಸೆ.10) ನಡೆದ ಸಭೆಯಲ್ಲಿ ಹುಬ್ಬಳ್ಳಿ ಎನ್‌ಜಿಇಎಫ್ ಪುನಶ್ಚೇತನದ ಪ್ರಸ್ತಾವ ಮುಂದಿಟ್ಟಿದ್ದಾರೆ. ವಿದ್ಯುತ್ ಪರಿವರ್ತಕಗಳ ತಯಾರಿಕೆಯಲ್ಲಿ ಜೆಎಫ್‌ಇ ಮುಂಚೂಣಿಯಲ್ಲಿದೆ. ಹುಬ್ಬಳ್ಳಿಯಲ್ಲಿ ಇರುವ ರಾಜ್ಯ ಸರ್ಕಾರಿ ಸ್ವಾಮ್ಯದ ಉದ್ಯಮವಾಗಿರುವ ನ್ಯೂ ಗವರ್ನಮೆಂಟ್ ಎಲೆಕ್ಟ್ರಿಕಲ್ ಫ್ಯಾಕ್ಟರಿಯನ್ನು (ಎನ್‌ಜಿಇಎಫ್) ರಾಜ್ಯ ಸರ್ಕಾರದ ಪಾಲುದಾರಿಕೆಯಡಿ ಪುನಶ್ಚೇತನಗೊಳಿಸುವ ಸಂಬಂಧ, ಪೂರ್ವಭಾವಿ ಮಾತುಕತೆ ನಡೆಸಲು ಕಂಪನಿಯ ಉನ್ನತಾಧಿಕಾರಿಗಳು ಹುಬ್ಬಳ್ಳಿಯ ಘಟಕಕ್ಕೆ ಭೇಟಿ ನೀಡಲು ಆಹ್ವಾನಿಸಲಾಗಿದೆ ಎಂದು ತಿಳಿಸಿದ್ದಾರೆ.

ಸಚಿವರ ಜೊತೆಗಿನ ಸಭೆಯಲ್ಲಿ ಕಂಪನಿಯ ಜೆಎಫ್‌ಇ ಷೋಜಿ ಕಂಪನಿಯ ಯಂತ್ರೋಪಕರಣಗಳ ವಿಭಾಗದ ಜನರಲ್ ಮ್ಯಾನೇಜರ್ ಹಿರೋಶಿ ಲಿಜಿಮಾ, ಎಲೆಕ್ಟ್ರಿಕಲ್ ಅಪ್ಲೈಯನ್ಸಸ್ ಸ್ಟೀಲ್ ಪ್ಲ್ಯಾನಿಂಗ್ ವಿಭಾಗದ ಮ್ಯಾನೇಜರ್ ಹಿಡೆಕಸು ಯೋಶಿಒಕೊ ಮತ್ತಿತರರು ಭಾಗವಹಿಸಿದ್ದರು.

## ಪೊಲೀಸಪ್ಪ ನಿಂದಲೇ ಕೈದಿಗಳಿಗೆ ಡ್ರಗ್ಸ್ ಸಪ್ಲೈ ?

## ಪರಪ್ಪನ ಅಗ್ರಹಾರದ ಕರ್ಮಕಾಂಡ ಬಯಲು




❑ ಸ್ನೇಹಜೀವಿ ನ್ಯೂಸ್

**ಬೆಂಗಳೂರು: ಪರಪ್ಪನ ಅಗ್ರಹಾರದ ಕಥೆಗಳು ಒಂದೆರಡಲ್ಲ ..ಜೈಲಿನಲ್ಲಿ ಮೊಬೈಲ್, ಕೈದಿಗಳಿಗೆ ರಾಜಾತಿಥ್ಯ ಸೇರಿದಂತೆ ಹಲವು ವಿಚಾರಗಳಲ್ಲಿ ಪರಪ್ಪ ನ ಅಗ್ರಹಾರ ಕುಖ್ಯಾ ತಿ ಪಡೆದಿದೆ. ಇದೀಗ ಕಲ್ಲಪ್ಪ ಅಬಾಚ್ಚಿ ಎಂಬ 2018 ಬ್ಯಾಚ್ ನ ಕಾರಾಗೃಹ ಸಿಬ್ಬಂದಿಯ ಕಲ್ಲಾಟ ಬಯಲಾಗಿದ್ದು ,**

ಈತನೇ ಜೈಲಿಗೆ ಆಶೀಶ್ ಆಯಿಲ್ ಡ್ರಗ್ಸ್ ತಂದು ಕೈದಿಗೆ ಸರಬರಾಜುಮಾಡುವ ವೇಳೆ ಸಿಕ್ಕಿಬಿದ್ದಿದ್ದಾನೆ.

ಕಳೆದ ಕೆಲವು ದಿನಗಳ ಹಿಂದೆ ಧಾರವಾಡ ಜೈಲಿನಿಂದ ಪರಪ್ಪ ನ ಅಗ್ರಹಾರಕ್ಕೆ ವರ್ಗಾವಣೆಯಾಗಿಬಂದಿದ್ದ ಕಲ್ಲಪ್ಪ ಅಬಾಚಿ ಓರ್ವ ಮಾಜಿ ಸೈನಿಕ. ಈತ ಜೈಲ್ ವಾರ್ಡನ್ ಆಗಿ 2018 ರಲ್ಲಿ ನೇಮಕವಾಗಿದ್ದ ಎನ್ನ ಲಾಗಿದೆ. ಈತ ತಾನೇ ದುಡ್ಡಿನ ಆಸೆಗೆ ತಾನೇ ಡ್ರಗ್ಸ್ ತಂದು ಕೈದಿಗಳಿಗೆ ಸಪ್ಲೈ ಮಾಡುವ ವೇಳೆ ಸಿಕ್ಕಿ ಬಿದ್ದಿದ್ದು ,

ಪರಪ್ಪ ನ ಅಗ್ರಹಾರಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು .

ಹೀಗಾಗಿ ಸದ್ಯ ನ್ಯಾಯಾಂಗಬಂಧನದಲ್ಲಿರುವ ಈತ ತಾನೇ ಕರ್ತವ್ಯ ನಿರ್ವಹಿಸುತ್ತಿದ್ದ ಅದೇ ಜೈಲಿನಲ್ಲಿ ಖೈದಿಯಂತೆ ಕಂಬಿ ಣಿಸಬೇದ ಪರಿಸ್ಥಿತಿ ತಂದುಕೊಂಡಿ ನೆದ್ರೆ ಈತಷ್ಟು ಎಣಿಸಬೇಕಾದ ಪರಿಸ್ಥಿತಿ ತಂದುಕೊಂಡಿದ್ದಾನೆ. ಆದ್ರೆ ಈತ ಎಷ್ಟು ದಿನಗಳಿಂದ ಈ ಡ್ರಗ್ಸ್ ಸಪ್ಲೈ ದಂಧೆಯಲ್ಲಿ ತೊಡಗಿದ್ದ,ಇದರ ಹಿಂದೆಯಾರೆಲ್ಲಾ ಇದ್ದಾರೆ ಎಂಬುದು ಇನ್ನಷ್ಟೇ ಪೊಲೀಸ್ ತನಿಖೆಯಿಂದ ತಿಳಿಯಬೇಕಿದೆ.

ಪರಪ್ಪನ ಅಗ್ರಹಾರದಲ್ಲಿರುವ ಜೈಲಿನ ಕ್ಯಾಂಟೀನ್ ವಸ್ತುಗಳನ್ನು ಬಳಸಿಕೊಂಡು, ಕಸ ನಿರ್ವಹಣೆಮಾಡುವ ಟ್ರ್ಯಾಕ್ಟ ರ್ಮೂಲಕ.. ಹೀಗೆ ಹಲವುಮಾರ್ಗಗಳಲ್ಲಿ ಈತ ಆಶೀಶ ಆಯಿಲ್ ಎಂಬ ಡ್ರ ಗ್ಸ್ ಸರಬರಾಜಗುತ್ತಿ ದ್ದ ಎನ್ನ ಲಾಗಿದೆ. ಈ ವೇಳೆ ಒಮ್ಮೆ ಡ್ರಗ್ಸ್ ಸಮೇತ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ.

## ಹುಬ್ಬಳ್ಳಿ : ಪಿಡಬ್ಲ್ಯುಡಿ ಇಲಾಖೆಯಲ್ಲಿ ಹೇಳೋರಿಲ್ಲ ...ಕೇಳೋರಿಲ್ಲ ....!




❑ ಸ್ನೇಹಜೀವಿ ನ್ಯೂಸ್

ಹುಬ್ಬಳ್ಳಿ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಲ್ಲಿ,ಖಾಲಿ ಕುರ್ಚಿಗಳ ದರ್ಬಾರ್ ಹೆಚ್ಚಾಗಿದೆ.ಬೆಳಗ್ಗೆ ಇರಲಿ ಮಧ್ಯಾಹ್ನವೇ ಆಗ್ಲಿ .. ಕಚೇರಿ ಅವಧಿಮುಗಿಯುವ ಸಮಯಕ್ಕೆ ಹೋದರೂ, ಅಧಿಕಾರಿಗಳು ಇರೋದೇ ಇಲ್ಲ.

ಮುಖ್ಯ ಕಾರ್ಯ ನಿರ್ವಾಹಕ ಇಂಜಿನಿಯರ್ ಚೇಂಬರ್,ಆಡಳಿತ ಶಾಖೆ,ಇಂಜಿನಿಯರ್ ವಿಭಾಗ,ಮೀಟಿಂಗ್ ಹಾಲ್ ಎಲ್ಲಾ ವಿಭಾಗದಲ್ಲೂ,ಖಾಲಿ ಕುರ್ಚಿಗಳ ದರ್ಶನವಾಗುತ್ತಿದೆ.

ಈ ಬಗ್ಗೆ ಲೋಕೋಪಯೋಗಿ ಮುಖ್ಯ ಕಾರ್ಯ ನಿರ್ವಾಹಕ ಇಂಜಿನಿಯರ್ ಸುಧಾಕರ್ ಕಟ್ಟಿಮನಿ ಅವರನ್ನ ಕೇಳಿದ್ರೆ ,ಧಾರವಾಡದಲ್ಲಿ ಮೀಟಿಂಗ್ ಇದೆ. ಎಲ್ಲಾ ಸಹಾಯಕ ಇಂಜಿನಿಯರ್ಸ್ ಅಲ್ಲೇ ಇದ್ದೇವೆ. ಕೋರ್ಟ್,ಆರ್.ಟಿ.ಐ ಮೇಲ್ಮನವಿ ಇರೋದಿದ್ರಿಂದ,ಆಡಳಿತ ಶಾಖೆ ಅಧಿಕಾರಿಗಳು ಇಲ್ಲ ಅಂತಾ ಸಮಜಾಯಿಷಿ ಕೊಡ್ತಾರೆ. ಆದ್ರೆ , ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ಕೊಠಡಿಯಲ್ಲಿರುವ ದಿನಚರಿ ನಾಮಫಲಕ ಕೂಡ ಖಾಲಿ ಖಾಲಿ ಇದೆ.

ಕಚೇರಿ ಹುಡುಕಿದ್ರೂ ಬಯೋಮೆಟ್ರಿಕ್ ಇಲ್ವೇ ಇಲ್ಲ.ಕಂಪ್ಯೂಟರ್ ಆಪರೇಟರ್,ಜವಾನ,ಸ್ವೀಪರ್ಮಾತ್ರ ಕಚೇರಿ ಬಾಗಿಲು ಓಪನ್ ಮಾಡಿಕೊಂಡು ಕೂತಿರ್ತಾರೆ.

ಸ್ಮಾರ್ಟ್ ಸಿಟಿ ಖ್ಯಾತಿಹೊತ್ತ ಹುಬ್ಬಳ್ಳಿಯಲ್ಲಿ ಲೋಕೋಪಯೋಗಿ ಉಪ ವಿಭಾಗದ ಕಚೇರಿಯಲ್ಲಿ ,

ಆಡಳಿತ ನಿರ್ವಹಣೆ, ಕಾಗದ ಪತ್ರ ವಿಚಾರಣೆಗಾದರೂ ಒಬ್ಬ ಅಧಿಕಾರಿ ಇರಲೇಬೇಕು.ಆದ್ರೆ ,ಪಿಡಬ್ಲ್ಯು ಡಿ ಇಲಾಖೆ ಅಧಿಕಾರಿಗಳು ಕೈಗೆ ಸಿಗ್ತಿಲ್ಲ.ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆ ವಿರುದ್ಧ ಕಠಿಣ ಕ್ರಮಕ್ಕೆ ಜನರು ಆಗ್ರಹಿಸುತ್ತಿದ್ದಾರ

## ಪೆನ್ ವಿಚಾರಕ್ಕಾಗಿ ೫ನೇ ತರಗತಿ ವಿದ್ಯಾರ್ಥಿಗೆ ಕಟ್ಟಿಗೆಯಿಂದ ಕಣ್ಣಿಗೆ ಇರಿದು ಕಣ್ಣುಗುಡ್ಡೆ ಒಡೆದ ೧ನೇ ತರಗತಿ ವಿದ್ಯಾರ್ಥಿ!



❑ ಸ್ನೇಹಜೀವಿ ನ್ಯೂಸ್

ಮಹಾಲಿಂಗಪುರ: ಸೆ.10: ಪೆನ್ ವಿಷಯಕ್ಕೆ ವಿದ್ಯಾರ್ಥಿಗಳ ನಡುವೆ ಆರಂಭವಾದ ಕ್ಷುಲ್ಲಕ ಜಗಳವೊಂದು ಕಣ್ಣು ಗುಡ್ಡೆ ತಗಿಯುವ ಹಂತಕ್ಕೆ ಹೋಗಿದ್ದು, ಅದೃಷ್ಟವಶಾತ್ ಬಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾನೆ.

ಪೆನ್ ವಾಪಸ್ ಕೇಳಿದ ವಿಷಯಕ್ಕೆ ಸಂಬಂಧಿಸಿದಂತೆ ಐದನೇ ತರಗತಿ ವಿದ್ಯಾರ್ಥಿ ಸಮರ್ಥ.ತಂದೆ ಕುಮಾರ.ಹಿರಟ್ಟಿ ಹಾಗೂ ಒಂದನೇ ತರಗತಿ ವಿದ್ಯಾರ್ಥಿ ಭಿಮಪ್ಪ ಆನಂದ ಲೋಕುರೆ ನಡುವೆ ಜಗಳ ಉಂಟಾಗಿದೆ. ಆರಂಭದಲ್ಲಿ ವಾಗ್ವಾದ ಸ್ವರೂಪ ಪಡೆದ ಈ ಘಟನೆ ಬಳಿಕ ವಿಕೋಪಕ್ಕೆ ಹೋಗಿದ್ದು, ಸಿಟ್ಟಿಗೆದ್ದ 1ನೇ ತರಗತಿ ವಿದ್ಯಾರ್ಥಿ ಕಟ್ಟಿಗೆಯಿಂದ ಮತ್ತೊಬ್ಬ 5ನೇ ತರಗತಿ ವಿದ್ಯಾರ್ಥಿ ಕಣ್ಣಿನ ಮೇಲೆ ಹಲ್ಲೆ ಮಾಡಿರುವ ಘಟನೆ ಜರುಗಿದೆ.

ಮಹಾಲಿಂಗಪುರ ಮತಕ್ಷೇತ್ರದ ಡವಳೇಶ್ವರ ಗ್ರಾಮದ ಮೊರಬ ವಸತಿ ತೋಟದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಈ ಘಟನೆ ನಡೆದಿದೆ. ಸದ್ಯ ಕಟ್ಟಿಗೆ ಇರಿತಕ್ಕೆ ಒಳಗಾಗಿರುವ ಬಾಲಕನನ್ನು ಅಥಣಿ ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಾಲಕನ ಬಲಗಣ್ಣಿಗೆ ಗಂಭಿರವಾದ ಪೇಟ್ಟಾಗಿರುವದ–ರಿಂದ ಚಿಕಿತ್ಸೆ ಮೂಲಕ ಆತನ ಕಣ್ಣು ಗುಡ್ಡೆಯನ್ನು ತೆಗೆಯಲಾಗಿದೆ ಎಂದು ಮಾಹಿತಿ ತಿಳಿದು ಬಂದಿದೆ.ಗಾಯಗೊಂಡ ಬಾಲಕನ ತಂದೆ ಕುಮಾರ ಹಿರಟ್ಟಿ ಮಾಹಲಿಂಗಪುರ ಪೊಲೀಸ ಠಾಣೆಯಲ್ಲಿ ಪ್ರಕರಣದ ಧಾಕಲು ಮಾಡಿದ್ದಾನೆ.

ಈ ಸಂಬಂಧ ಮುಖ್ಯ ಶಿಕ್ಷಕಿ ಜಯಶ್ರೀ ನಡುವಿನಕೇರಿ ಹಾಗೂ ಅತಿಥಿ ಶಿಕ್ಷಕಿ ಶಿಲ್ಪಾ ಅಂಬಿಗೆ ಪೋಷಕರು ಮಾಹಿತಿ ನೀಡಿದ್ದರು. ಶಿಕ್ಷಕರು ಗಂಭೀರವಾಗಿ ಪರಿಗಣಿಸದೆ, ಸ್ಥಳಕ್ಕೆ ಭೇಟಿ ನಿಡದೆ ಹಾಗೂ ಸಂಬಂಧ ಯಾವುದೇ ಕ್ರಮಕ್ಕೆ ಕೂಡ ಮುಂದಾಗದಿರುವದಕ್ಕೆ ಇವರ ಬೇಜವಾಬ್ದಾರಿನೆ ಈ ಘಟನೆಗೆ ಕಾರಣ ಎಂದು ಪ್ರಕ್ರಣ ಧಾಕಲು ಮಾಡಿದ್ದಾರೆ.

### ಶಿಕ್ಷಕರ ವಿರುದ್ಧ ಪೋಷಕರ ದೂರು!

ಮಕ್ಕಳ ಜಗಳ ಆಗಾಗ ನಡೆಯುತ್ತಿದ್ದರೂ ಶಿಕ್ಷಕರು ಕ್ರಮವಹಿಸಿಲ್ಲ ಎಂಬ ಆರೋಪ ಕೇಳಿಬಂದಿದ್ದು, ಸೂಕ್ತ ಕ್ರಮ ವಹಿಸದ ಶಿಕ್ಷಕರ ವಿರುದ್ಧ ದೂರು ದಾಖಲಾಗಿದೆ. ಸ್ಥಳಕ್ಕೆ ಮುಧೋಳ ಕ್ಷೇತ್ರ ಶಿಕ್ಷಣಾಧಿಕಾರಿ ಸಮೀರ ಮುಲ್ಲಾ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಇತ್ತ ಜಮಖಂಡಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ್ ಹಾಗೂ ಮುಧೋಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಶಿಕ್ಷಕರ ವಿರುದ್ಧ ಕ್ರಮಕೈಗೊಳ್ಳಲು ಪೋಷಕರು ಮನವಿ ಸಲ್ಲಿಸಿದ್ದಾರೆ. ಕರ್ತವ್ಯ ನಿರ್ಲಕ್ಷ್ಯ ತೋರಿದ ಶಿಕ್ಷಕರ ವಿರುದ್ಧ ಕ್ರಮ ಕೈಗೊಳ್ಳುವ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ್ ಭರವಸೆ ನೀಡಿದ್ದಾರೆ. ಈ ಘಟನೆ ಸಂಭವಿಸಿದ ಹಿನ್ನೆಲೆ, ಮುಖ್ಯಶಿಕ್ಷಕಿ ಜಯಶ್ರೀ ನಡುವಿನಕೇರಿ, ಅತಿಥಿ ಶಿಕ್ಷಕಿ ಶಿಲ್ಪಾ ಅಂಬಿ ವಿರುದ್ಧ ಮಹಾಲಿಂಗಪೂರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.ಪೋಷಕರು.

## ಬಿಪಿಎಲ್ ಕಾರ್ಡ್ ಅಕ್ರಮ ಸರ್ಕಾರಿ ನೌಕರರಿಗೆ ದಂಡದ ಬಿಸಿ!



❑ ಸ್ನೇಹಜೀವಿ ನ್ಯೂಸ್

ಬೆಳಗಾವಿ : ಬಿಪಿಎಲ್ ಕಾರ್ಡ್ ಆಕ್ರಮ ನಿಯಂತ್ರಣಕ್ಕೆ ಸರ್ಕಾರ ಅನೇಕ ಕಾರ್ಯಕ್ರಮರೂಪಿಸಿದ್ರೂ ಯಾವುದೇ ಪ್ರಯೋಜನ ಆಗ್ತಿಲ್ಲ . ಇದೀಗ ಬೆಳಗಾವಿಯಲ್ಲಿ ಬಡವರ ಅನ್ನ ಕಸಿಯುತ್ತಿ ದ್ದ ಜನರಿಗೆದಂಡದ ಬಿದ್ದಿದೆ.

ಬಡ ಕುಟುಂಬಗಳಿಗೆ ಸೇರಬೇಕಾದ 'ಬಿಪಿಎಲ್' ರೇಷನ್ ಕಾರ್ಡ್ ಪಡೆದ 1600ಕ್ಕೂ ಅಧಿಕ ಸರಕಾರಿ ನೌಕರರಿಗೆ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯ ವಹಾರಗಳ ಇಲಾಖೆ 1.39 ಕೋಟಿ ರೂ. ದಂಡ ವಿಧಿಸಿ ಬಿಸಿಮುಟ್ಟಿಸಿದೆ.

2024–25ನೇ ಸಾಲಿನಲ್ಲಿ ಮತ್ತೆ ಕಾರ್ಯಾಚರಣೆ ನಡೆಸಿದಾಗ ಬಿಪಿಎಲ್ ಕಾರ್ಡ್ ಪಡೆದ 363 ನೌಕರರನ್ನು ಗುರುತಿಸಿ 17.10 ಲಕ್ಷರೂ. ದಂಡ ವಸೂಲಿಮಾಡಲಾಗಿದೆ. ಇದೀಗ ಜಿಲ್ಲೆಯ ಒಟ್ಟು 1,679 ಸರಕಾರಿ ನೌಕರರಿಗೆ ನೋಟಿಸ್ ಜಾರಿಮಾಡಿ ಅವರಿಂದ 1,39,27,221 ರೂ.ದಂಡ ವಸೂಲಿಮಾಡಲಾಗಿದೆ.

2025–26ರಲ್ಲಿ ಕಾರ್ಯಾಚರಣೆ ವೇಳೆಯಲ್ಲಿ 1,407 ಅನರ್ಹ ಕುಟುಂಬಗಳು ಪಡೆದಿರುವ ಬಿಪಿಎಲ್ ಪಡಿತರ ಚೀಟಿಗಳನ್ನು ಪತ್ತೆಮಾಡಿ 7,55,177 ರೂ. ದಂಡ ಸಂಗ್ರಹಿಸಲಾಗಿದೆ. ಸ್ವಯಂ ಪ್ರೇರಿತರಾಗಿ 932 ಅನರ್ಹರು ತಾವು ಪಡೆದಿದ್ದ ಬಿಪಿಎಲ್ ಕಾರ್ಡ್ಗಳನ್ನು ಸರೆಂಡರ್ಮಾಡಿದ್ದಾರೆ. ಹಾಗೆಯೇಆದಾಯ ತೆರಿಗೆ ಪಾವತಿಮಾಡುತ್ತಿದ್ದ 591 ಜನರ ಬಿಪಿಎಲ್ ಕಾರ್ಡ್ಗಳನ್ನು ರದ್ದು ಪಡಿಸಲಾಗಿದೆ.

ಸದ್ಯ 67,667 ಅಂತ್ಯೋ ದಯ, 10,72,692 ಬಿಪಿಎಲ್ ಹಾಗೂ 3,30,455 ಎಪಿಎಲ್ ಪಡಿತರ ಚೀಟಿಗಳು ಚಾಲ್ತಿಯಲ್ಲಿದ್ದು , ಒಟ್ಟು 50,79,707 ಫಲಾನುಭವಿಗಳು ಇದ್ದಾರೆ. ಬಿಪಿಎಲ್ ಕಾರ್ಡ್ ಪಡೆದ ಅನರ್ಹರ ಪತ್ತೆ ಕಾರ್ಯಾಚರಣೆಯಲ್ಲಿ 2022ರಲ್ಲಿ 1,316 ಸರಕಾರಿ ನೌಕರರು ಪಡೆದಿದ್ದ ಬಿಪಿಎಲ್ ಪಡಿತರ ಚೀಟಿಗಳನ್ನು ಪತ್ತೆ ಮಾಡಿ,

1.22 ಕೋಟಿರೂ.ವಿಧಿಸಲಾಗಿತ್ತು .

ಇನ್ನು , ಸರಕಾರಿ ನೌಕರರು ಪಡೆದಿದ್ದ 1,679 ಬಿಪಿಎಲ್ ಚೀಟಿಗಳನ್ನು ಎಪಿಎಲ್ ಪಡಿತರ ಚೀಟಿಗಳಾಗಿ ಬದಲಾಯಿಸಲಾಗಿದೆ. ಇದರ ಜತೆಗೆ ಆಹಾರ ನಿರೀಕ್ಷಕರು ತನಿಖೆಮಾಡಿ ಹೆಚ್ಚಿನ ಆದಾಯ ಹೊಂದಿರುವ, 3 ಹೆಕ್ಟೇರ್ಗಿಂತ ಹೆಚ್ಚಿನ ಜಮೀನುಹೊಂದಿರುವ 7,544 ಕುಟುಂಬ ಹಾಗೂ ಸ್ವಯಂ ಪ್ರೇ–ರಿತರಾಗಿ ಸರೆಂಡರ್ ಮಾಡಿರುವ ಅನರ್ಹರ ಪಡಿತರ ಚೀಟಿಗಳನ್ನು ಕೂಡ ಎಪಿಎಲ್ ಪಡಿತರ ಚೀಟಿಗಳಾಗಿ ಪರಿವರ್ತನೆಮಾಡಲಾಗಿದೆ.

ಇನ್ನು , ರಾಜ್ಯ ಸರ್ಕಾರ ಈಗಾಗಲೇ ಅರ್ಹರಿಗೆ ಬಿಪಿಎಲ್ ಕಾರ್ಡ್ ಇರಬೇಕು, ಅನರ್ಹರ ಕಾರ್ಡ್ ರದ್ದು ಗೊಳಿಸುವ ಪರಿಷ್ಕರಣೆ ಪ್ರ ಕ್ರಿಯೆಯಲ್ಲಿ ಮುಂದುವ–ರಿದಿದೆ. ಇದರ ನಡುವೆ ಸುಮಾರು 5 ಸಾವಿರಕ್ಕೂ ಅಧಿಕ ಸರ್ಕಾರಿ ನೌಕರರೂಬಿಪಿ–ಎಲ್ ಕಾರ್ಡ್ಹೊಂದಿರುವುದು ಬೆಳಕಿಗೆ ಬಂದಿದ್ದು , ಅಂಥವರ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು ಎಂದು

### ಸಿಎಂ ಸಿದ್ದ ರಾಮಯ್ಯ ಇದೀಗ ಖಡಕ್ಸೂಚನೆ ನೀಡಿದ್ದಾರೆ.

ಈ ಕುರಿತು ಕರ್ನಾಟಕ ಸರ್ಕಾರಿ ನೌಕರರ ಸಂಘದಮಾಜಿ ಅಧ್ಯಕ್ಷ ಷಡಕ್ಷರಿ ಮಾಹಿತಿ ನೀಡಿದ್ದಾರೆ. ಈ ಹಿಂದೆಯೂಕೆಲ ಸರ್ಕಾರಿ ನೌಕರರು ಬಿಪಿಎಲ್ ಕಾರ್ಡ್ ಸೌಲಭ್ಯ ಪಡೆಯುತ್ತಿರುವ ಆರೋಪಗಳು ಕೇಳಿಬಂದಿದ್ದವು.

ನಿಜವಾಗಲೂಬಿಪಿಎಲ್ ಕಾರ್ಡ್ ಗಳಮೂಲಕ ಬಡವರಿಗೆ ಸರ್ಕಾ–ರಿಯೋಜನೆಗಳು ತಲುಪಬೇಕು. ಇತ್ತೀ ಚೆಗೆ ಸರ್ಕಾರಿ ನೌಕರಿ ಪಡೆದುಕೊಂಡ ಕೆಲವರು ಸರ್ಕಾರಿ ಕೆಲಸ ಸಿಗುವಮೊದಲೇ ಬಿಪಿಎಲ್ ಕಾರ್ಡ್ಹೊಂದಿರುತ್ತಾರೆ. ಅಂತವರು ಸರ್ಕಾರಕ್ಕೆ ಬಿಪಿಎಲ್ ಕಾರ್ಡ್ ಹಿಂದಿರುಗಿಸುವುದನ್ನು ಮರೆತಿರುತ್ತಾರೆ. ಇನ್ನು ಕೆಲವರು ಸರ್ಕಾರಿ ಸೇವೆಗೆ ಸೇರಿದರೂ

**ಬಿಪಿಎಲ್ ಕಾರ್ಡ್ ಸರ್ಕಾರಕ್ಕೆ ಹಿಂದಿರುಗಿಸಿರಲ್ಲ . ಕೆಲವರು ಕಾರ್ಡ್ ಸರ್ಕಾರಕ್ಕೆ ವಾಪಸ್ ನೀಡಿರುತ್ತಾರೆ ಎಂದು ಷಡಕ್ಷರಿ ಹೇಳಿದ್ದಾರೆ.**

Snehajeevi Kannada Daily, Printed and Published and owned by ABDULHAMEED SHALAGAR House No. 6421 Rajput Oni, Betageri-Gadag, State : Karnataka
Editor : ABDULHAMEED SHALAGAR, Printed at : Prabhu Graphics, 3094A, Station Road Gadag, District Gadag 582 101 State : Karnataka